ಸಂಪುಟ : 9 ಸಂಚಿಕೆ 196 ಪುಟ : 4 ಬೆಲೆ: 3.00 ಗುರುವಾರ ಸೆಪ್ಟೆಂಬರ್ 12 2024 Mob : 9448326533- 9019256545 ಗದಗ

ಸಂಪಾದಕರು : ಎಚ್.ಎಮ್. ಶರೀಫನವರ್

# ವಿಜಯ ಸಾಕ್ಷಿ

ವಾಸ್ತವ, ವಸ್ತುನಿಷ್ಠ, ವಿಭಿನ್ನ...

VIJAYA SAKSHI KANNADA DAILY ಕನ್ನಡ ದಿನಪತ್ರಿಕೆ




Volume : 9 Issue : 196 Pages : 4 Price : 3.00 Thursday september 12 2024 Gadag RNINo:KARKAN/2015/63412 E-mail: vijayasakshidaily@gmail.com Post Regn.No:GDG/72/2023-25

### ವಿಶ್ವ ಚೇತನ ಸ್ವಾಮಿ ವಿವೇಕಾನಂದರ ಕಂಚಿನ ಪುತ್ಥಳಿಯನ್ನು ಅನಾವರಣಗೊಳಿಸಿದ ಸಚಿವ ಎಚ್.ಕೆ.ಪಾಟೀಲ

# ವಿವೇಕಾನಂದರ ಸಿಡಿಲ ನುಡಿಗಳು ಯುವಕರಗೆ ದಾರಿದೀಪವಾಗಲಿ



■ ವಿಜಯಸಾಕ್ಷಿ ಸುದ್ದಿ, ಗದಗ

* ವಿಜಯಸಾಕ್ಷಿ ಸುದ್ದಿ, ಗದಗ

ಸ್ವಾಮಿ ವಿವೇಕಾನಂದ ಅವರ ಕಂಚಿನ ಪುತ್ಥಳಿ ನೋಡಿದಾಕ್ಷಣ ಅವರ ಸಂದೇಶ ಹಾಗೂ ಮಿಚಿನಂತೆ ಹೊರಹುಮ್ಮುವ ಅವರ ನುಡಿಗಳು ಯುವಕರಿಗೆ ದಾರಿದೀಪವಾಗಲಿ ಎಂದು ಜಿಲ್ಲಾ ಉಸ್ತುವಾರಿ ಸಚಿವ ಎಚ್.ಕೆ. ಪಾಟೀಲ ಹೇಳಿದರು.

ನಗರದ ಆರ್.ಡಿ.ಪಿ.ಆರ್ ವಿಶ್ವವಿದ್ಯಾಲಯದಲ್ಲಿ ಬುಧವಾರ ವಿಶ್ವ ಚೇತನ ಸ್ವಾಮಿ ವಿವೇಕಾನಂದ ಅವರ ಕಂಚಿನ ಪುತ್ಥಳಿಯನ್ನು ಅನಾವರಣಗೊಳಿಸಿ ಸಚಿವರು ಮಾತನಾಡಿದರು.

ನಿರ್ಭಯಾನಂದ ಅವರ ಪ್ರೇರಣೆ ಮತ್ತು ಶಕ್ತಿ ಪಡೆದು ಅಂದಿನ ಕುಲಪತಿ ಪ್ರೊ. ವಿಷ್ಣುಕಾಂತ ಚಟಪಲ್ಲಿ, ಮಾಜಿ ಶಾಸಕ ಡಿ.ಆರ್. ಪಾಟೀಲ ಅವರ ಸತತ ಪ್ರಯತ್ನವು ಇದಕ್ಕೆ ಸಾಕ್ಷಿಯಾಗಿದೆ. ಪುತ್ಥಳಿ ನೋಡಿದಾಕ್ಷಣ ವಿವೇಕಾನಂದರು ನೀಡಿರುವ ಸಂದೇಶಗಳು ನೆನಪಾಗುತ್ತವೆ. ಅದರಿಂದ ಸಹಜವಾಗಿ ಪ್ರೇರಣೆ ಬರುತ್ತದೆ. ಗದಗದಲ್ಲಿರುವ ಐತಿಹಾಸಿಕ ಪ್ರಸಿದ್ಧ ಸ್ಥಳವಾದ ವೀರನಾರಾಯಣ ದೇವಸ್ಥಾನ ನೋಡಲು ಬಂದವರು ವಿಶ್ವವಿದ್ಯಾಲಯದ ಸಬರಮತಿ ಆಶ್ರಮಕ್ಕೆ ಭೇಟಿ ನೀಡುತ್ತಿದ್ದಾರೆ. ಗಾಂಧಿ ದರ್ಶನ ಮುಗಿಸಿ ಗ್ರಾಮೀಣ ಕಲೆಯ ನೋಡಿಕೊಂಡು ಹೋರಬಂದಾಗ ಬದುಕಿನಲ್ಲಿ ಬದಲಾವಣೆಯ ಗಾಳಿ ಬೀಸಿದಂತಾಗುತ್ತದೆ. ಹಾಗೇಯೇ ವಿಶ್ವ ಚೇತನ ಸ್ವಾಮಿ ವಿವೇಕಾನಂದ ಅವರ ಪುತ್ಥಳಿ ನೋಡಿ ಅದರ ಹತ್ತಿರಕ್ಕೆ ಹೋದಾಗ ಎಲ್ಲರಿಗೂ ಪ್ರೇರಣೆ ಬರುತ್ತದೆ ಎಂದು ವಿಶ್ವಾಸ ವ್ಯಕ್ತಪಡಿಸಿದರು.

ವಿ.ಪ ಸಭಾಪತಿ ಬಸವರಾಜ ಹೊರಟ್ಟಿ ಮಾತನಾಡಿ, ಪಂಚಾಯತ್ ರಾಜ್ ವಿಶ್ವವಿದ್ಯಾಲಯದಲ್ಲಿ ಸ್ವಾಮಿ ವಿವೇಕಾನಂದರ ಕಂಚಿನ ಪುತ್ಥಳಿ ಅನಾವರಣ ಕಾರ್ಯಕ್ರಮದಲ್ಲಿ ಪಾಲ್ಗೊಂಡಿದ್ದು ಹೆಮ್ಮೆಯ ಮತ್ತು ಗರ್ವದ ಸಂಗತಿ. ಈ ಮೂಲಕ ಮಕ್ಕಳಿಗೆ ಶಿಕ್ಷಣ ಜೊತೆಗೆ ಸಂಸ್ಕಾರ ನೀಡುಲು ಪ್ರೇರಣೆಯಾಗಿದೆ ಎಂದು ಹೇಳಿದರು.

ಕರ್ನಾಟಕ ರಾಜ್ಯದಲ್ಲಿ ವಿಶಾಲ ಜಿಲ್ಲೆಗಳನ್ನು ವಿಂಗಡಿಸಿ ಹೊಸ ಜಿಲ್ಲೆಗಳನ್ನು ಮಾಡಿದರ ಪೈಕಿ ಗದಗ ಜಿಲ್ಲೆಯೂ ಅತ್ಯಂತ ಪ್ರಗತಿಪರ ಮತ್ತು ಮಾದರಿ ಜಿಲ್ಲೆಯಾಗಿ ಹೊರಹೊಮ್ಮಿದೆ. ಅಂತಹ ಜಿಲ್ಲೆಯಲ್ಲಿ ಆರ್.ಡಿ.ಪಿ.ಆರ್. ವಿಶ್ವವಿದ್ಯಾಲಯ ಸ್ಥಾಪಿಸಿದ ಕೀರ್ತಿ ಸಚಿವ ಎಚ್.ಕೆ. ಪಾಟೀಲರಿಗೆ ಸಲ್ಲುತ್ತದೆ. ಅಂತಹ ವಿಶ್ವವಿದ್ಯಾಲಯದಲ್ಲಿ ಅನಾವರಣಗೊಂಡಿರುವ ಸ್ವಾಮಿ ವಿವೇಕಾನಂದರ ಮೂರ್ತಿಯ ಸ್ಪೂರ್ತಿಯಿಂದ ಎಲ್ಲಾ ವಿದ್ಯಾರ್ಥಿಗಳು ಶ್ರೇಷ್ಠ ವ್ಯಕ್ತಿಗಳಾಗಿ ತಂದೆ-ತಾಯಿ, ಗುರುಗಳ ಪ್ರೀತಿ ವಿಶ್ವಾಸ ಗಳಿಸಬೇಕು. ಶಿಕ್ಷಣ ವ್ಯವಸ್ಥೆ ಕೇವಲ ಪಾಠ ಪ್ರವಚನಕ್ಕೆ ಸೀಮಿತವಾಗಿದೆ ಬಸವಣ್ಣ, ಗಾಂಧೀಜಿಯಂತಹ ಮಹನೀಯರ ಜೊತೆಗೆ ಹೋರಾಟಗಾರರ ಮಾರ್ಗದರ್ಶನಗಳನ್ನು ಸ್ಮರಿಸುವುದು ನಮ್ಮೆಲ್ಲರ ಕರ್ತವ್ಯವಾಗಿದೆ ಎಂದರು.

ಆರ್‌ಡಿಪಿಆರ್ ಸಚಿವ ಪ್ರಿಯಾಂಕ್ ಖರ್ಗೆ ವಿಡಿಯೋ ಸಂದೇಶದ ಮೂಲಕ ಮಾತನಾಡಿ, 1893ರಲ್ಲಿ ಸ್ವಾಮಿ ವಿವೇಕಾನಂದರು ದೇಶದ ಸಂಸ್ಕೃತಿ, ಧರ್ಮವನ್ನು ಮತ್ತು ಆಧ್ಯಾತ್ಮವನ್ನು ವಿಶ್ವಕ್ಕೆ ಪ್ರಚುರಪಡಿಸಿದ್ದಾರೆ. ಅವರ ಪ್ರೇರಣೆಯ ನುಡಿ, ತತ್ವ-ಸಿದ್ಧಾಂತವು ಇಂದಿನ ಯುವಕರಿಗೆ ದಾರಿ ದೀಪವಾಗಿದೆ. ಹಾಗಾಗಿ ಇಂದು ಆರ್‌ಡಿಪಿಆರ್ ವಿಶ್ವವಿದ್ಯಾಲಯದಲ್ಲಿ ಅನಾವರಣಗೊಂಡಿರುವ ವಿಶ್ವ ಚೇತನ ಸ್ವಾಮಿ ವಿವೇಕಾನಂದರ ಕಂಚಿನ ಪುತ್ಥಳಿ ಎಲ್ಲರಿಗೂ ನವ ಉತ್ಸಾಹವನ್ನು ತುಂಬಲಿ ಎಂದು ಸಂದೇಶ ನೀಡಿದರು.

> ಇದೇ ದಿನಾಂಕದಂದು ಸ್ವಾಮಿ ವಿವೇಕಾನಂದರು ಚಿಕಾಗೋದಲ್ಲಿ ಭಾಷಣ ಮಾಡಿ ಜಗತ್ತನ್ನೇ ಆಕರ್ಷಿಸಿದ್ದರು. ಹಾಗಾಗಿ ಅದೇ ದಿನದಂದು ಆರ್‌ಡಿಪಿಆರ್ ವಿಶ್ವವಿದ್ಯಾಲಯದಲ್ಲಿ ವಿವೇಕಾನಂದರ ಕಂಚಿನ ಪುತ್ಥಳಿ ಅನಾವರಣಗೊಂಡಿರುವುದು ಯೋಗಾಯೋಗವಾಗಿದೆ. ಇದು ಎಲ್ಲರ ಸೌಭಾಗ್ಯ ಮತ್ತು ಅಭಿವೃದ್ಧಿಯ ಶುಭ ಚಿಹ್ನೆಯಾಗಿದೆ. ಮಿಂಚಿನಂತೆ ಹೊರಹೊಮ್ಮುವ ವಿವೇಕಾನಂದರ ದಿಟ್ಟ ಮಾತುಗಳನ್ನು ವಿದ್ಯಾರ್ಥಿಗಳು ಮತ್ತು ಗ್ರಾಮೀಣ ಭಾಗದ ಯುವಜನರು ಓದಿ ಅರ್ಥೈಸಿಕೊಂಡು ಜೀವನದಲ್ಲಿ ಅಳವಡಿಸಿಕೊಂಡು, ಗ್ರಾಮಗಳ ಉದ್ಧಾರಕ್ಕೆ ಕೈಜೋಡಿಸುವಂತಾಗಬೇಕು.
>
> – ಎಚ್.ಕೆ. ಪಾಟೀಲ.
> ಗದಗ ಜಿಲ್ಲಾ ಉಸ್ತುವಾರಿ ಸಚಿವರು.

ಗದುಗಿನ ರಾಮಕೃಷ್ಣ ವಿವೇಕಾನಂದ ಆಶ್ರಮದ ಶ್ರೀ ನಿರ್ಭಯಾನಂದ ಸ್ವಾಮೀಜಿ ಮಾತನಾಡಿ, ಸ್ವಾಮಿ ವಿವೇಕಾನಂದರನ್ನು ಒಂದು ಧರ್ಮಕ್ಕೆ ಸೀಮಿತಗೊಳಿಸಿ ಆಧಾರ ರಹಿತ ವಿಚಾರವನ್ನು ಮಾಡುತ್ತಾರೆ. ಆದರೆ ಸ್ವಾಮಿ ವಿವೇಕಾನಂದರು ಯಾವುದೇ ದೇವರು ಅಥವಾ ಧರ್ಮವನ್ನು ನಂಬುವುದಿಲ್ಲ. ಅವರ ಉದ್ದೇಶ ಒಬ್ಬ ಸಾಮಾನ್ಯ ವ್ಯಕ್ತಿಯನ್ನು ಅಸಮಾನ್ಯ ವ್ಯಕ್ತಿಯನ್ನಾಗಿಸುವುದು ಮತ್ತು ಆತನಲ್ಲಿರುವ ಅನಂತ ಶಕ್ತಿಯನ್ನು ತಿಳಿಸಿಕೊಟ್ಟು ಸಾಧನಾ ಕಾರ್ಯ ಮಾಡಿಸುವುದಾಗಿದೆ ಎಂದರು.

ಇದೇ ಸಂದರ್ಭದಲ್ಲಿ ವಿಶ್ವವಿದ್ಯಾಲಯದ 'ಗ್ರಾಮೋದಯ' ತ್ರೈಮಾಸಿಕ ಪತ್ರಿಕೆಯನ್ನುವ ಮತ್ತು ಅಂತಾರಾಷ್ಟ್ರೀಯ ಪ್ರಜಾಪ್ರಭುತ್ವ ದಿನಾಚರಣೆಯ ಪೋಸ್ಟರ್ ಅನ್ನು ಬಿಡುಗಡೆ ಗೊಳಿಸಿದರು. ಸಮಾರಂಭದಲ್ಲಿ ವಿ.ಪ ಸದಸ್ಯ ಎಸ್.ವಿ. ಸಂಕನೂರ, ಜಿಲ್ಲಾಧಿಕಾರಿ ಗೋವಿಂದರೆಡ್ಡಿ, ಪ್ರೊ. ಬಿ.ತಿಮ್ಮೇಗೌಡ, ಅನಸವ್ವ ಸುರೇಶ್ ಪವಾರ, ಅನಸೂಯಾ ಬಾಳಪ್ಪ ಇದ್ದರು. ಕಾರ್ಯಕ್ರಮವನ್ನು ಪ್ರಕಾಶ ಮಾಚೇನಹಳ್ಳಿ ನಿರೂಪಿಸಿದರು, ಪ್ರಶಾಂತ ಜೆ.ಸಿ. ವಂದಿಸಿದರು.



> ವಿಶ್ವ ವಿದ್ಯಾಲಯದ ಪ್ರಭಾರಿ ಕುಲಪತಿ ಸುರೇಶ ನಾಡಗೌಡರ ಸ್ವಾಗತಿಸಿ, ಪ್ರಾಸ್ತಾವಿಕವಾಗಿ ಮಾತನಾಡಿ, ಈಗಾಗಲೇ ವಿಶ್ವ ವಿದ್ಯಾಲಯದಲ್ಲಿ ಸಬರಮತಿ ಆಶ್ರಮ ನಿರ್ಮಿಸಿ ಗಾಂಧಿಯವರ ಆಶಯ ಚಿಂತನೆಗಳನ್ನು ವಿದ್ಯಾರ್ಥಿಗಳಿಗೆ ನೀಡುಲಾಗುತ್ತಿದ್ದು, ಜೊತೆಗೆ ಸ್ವಾಮಿ ವಿವೇಕಾನಂದರ ಜೀವಿತಾವಧಿ ಪ್ರತಿಬಿಂಬಿಸುವ 39.5 ಅಡಿಯ ಕಂಚಿನ ಪುತ್ಥಳಿ ಸ್ಥಾಪಸಿ ಅವರ ಸಂದೇಶಗಳನ್ನು ವಿದ್ಯಾರ್ಥಿಗಳಿಗೆ ನೀಡಲಾಗುತ್ತಿದೆ ಎಂದು ಹೇಳಿದರು.

## ತ್ರಿಸದಸ್ಯ ಸಮಿತಿ ನೇಮಕ

■ ವಿಜಯಸಾಕ್ಷಿ ಸುದ್ದಿ, ಗದಗ

ಕರ್ನಾಟಕ ಲೋಕಸೇವಾ ಆಯೋಗವು ಸೆಪ್ಟೆಂಬರ್ 14 ಮತ್ತು 15ರಂದು ವಿವಿಧ ಇಲಾಖೆಗಳ ಗ್ರುಪ್ ಬಿ ವೃಂದದ (ಆರ್‌ಪಿಸಿ) ಹುದ್ದೆಗಳಿಗೆ ಕನ್ನಡ ಭಾಷಾ ಪರೀಕ್ಷೆ ಮತ್ತು ಸ್ಪರ್ಧಾತ್ಮಕ ಪರಿಕ್ಷೆಗಳನ್ನು ನಡೆಸಲಿದೆ. ಪರೀಕ್ಷೆಗಳು ಸುಗಮವಾಗಿ ಮತ್ತು ವ್ಯವಸ್ಥಿವಾಗಿ ನಡೆಯಲು ಜಿಲ್ಲಾ ಮಟ್ಟದ ತ್ರಿ-ಸದಸ್ಯ ಸಮಿತಿಯನ್ನು, ವೀಕ್ಷಕರನ್ನು, ಸ್ಥಳೀಯ ನಿರೀಕ್ಷಣಾಧಿಕಾರಿ ಹಾಗೂ ಮಾರ್ಗಾಧಿಕಾರಿಗಳನ್ನು ನೇಮಕ ಮಾಡಲಾಗಿದೆ, ಅಧಿಕಾರಿಗಳು ತಮಗೆ ನಿಗದಿಪಡಿಸಿದ ಕರ್ತವ್ಯಗಳನ್ನು ನಿರ್ವಹಿಸತಕ್ಕದ್ದು. ಪ್ರಶ್ನೆ ಪತ್ರಿಕೆ ಹಾಗೂ ಉತ್ತರ ಪತ್ರಿಕೆಗಳನ್ನು ಕೊಂಡೊಯ್ಯುವ ಸಮಯದಲ್ಲಿ ಉಸ್ತುವಾರಿ ತಂಡಕ್ಕೆ ಅಗತ್ಯ ಬಂದೋಬಸ್ತ್ ವ್ಯವಸ್ಥೆ ಕೈಗೊಳ್ಳಬೇಕೆಂದು ಜಿಲ್ಲಾಧಿಕಾರಿ ಗೋವಿಂದರೆಡ್ಡಿ ಆದೇಶಿಸಿದ್ದಾರೆ.

## ಶಾಸಕ ನಾಗೇಂದ್ರ ಸೇರಿ 25 ಮಂದಿಯ ವಿರುದ್ಧ ಚಾರ್ಜ್‌ಶೀಟ್ ಸಲ್ಲಿಸಿದ ಇಡಿ

■ ವಿಜಯಸಾಕ್ಷಿ ಸುದ್ದಿ, ಬೆಂಗಳೂರು

ರ್ನಾಟಕ ಮಹರ್ಷಿ ವಾಲ್ಮೀಕಿ ಪರಿಶಿಷ್ಟ ಪಂಗಡಗಳ ಅಭಿವೃದ್ಧಿ ನಿಗಮದ (ಕೆಎಂವಿಎಸ್‌ಟಿಡಿಸಿಎಲ್) ಬ್ಯಾಂಕ್ ಖಾತೆಯಿಂದ ಅಕ್ರಮವಾಗಿ 95 ಕೋಟಿ ರೂಪಾಯಿ ಹಣ ವರ್ಗಾಯಿಸಿರುವ ಪ್ರಕರಣಕ್ಕೆ ಸಂಬಂಧಿಸಿದಂತೆ ಮಾಜಿ ಸಚಿವ ಬಿ ನಾಗೇಂದ್ರ ಸೇರಿ 25 ಆರೋಪಿಗಳ ವಿರುದ್ಧ ಜಾರಿ ನಿರ್ದೇಶನಾಲಯ (ಇಡಿ) 4,970 ಪುಟಗಳ ಆರೋಪ ಪಟ್ಟಿ ಹಾಗೂ 144 ಪುಟಗಳ ದೂರನ್ನು ಸೋಮವಾರ (ಸೆ.9) ಜನಪ್ರತಿನಿಧಿಗಳ ವಿಶೇಷ ನ್ಯಾಯಾಲಯಕ್ಕೆ ಸಲ್ಲಿಸಿದೆ.

### ಗಣೇಶ ಮೂರ್ತಿ ವಿಸರ್ಜನಾ ಕಾರ್ಯಕ್ರಮದ ಹಿನ್ನೆಲೆ

# ಮದ್ಯ ಮಾರಾಟ, ಸಾಗಾಟ ನಿಷೇಧ

■ ವಿಜಯಸಾಕ್ಷಿ ಸುದ್ದಿ, ಗದಗ

ಗದಗ ಜಿಲ್ಲೆಯಾದ್ಯಂತ ಶ್ರೀ ಗಣೇಶ ಹಬ್ಬವನ್ನು ಆಚರಿಸಲಾಗುತ್ತಿದ್ದು, ಗಣೇಶ ಮೂರ್ತಿಗಳನ್ನು ಆಯಾ ಸಂಘಟಕರು, ಸಾರ್ವಜನಿಕರು ಮೆರವಣಿಗೆ ಮೂಲಕ ಸ್ಥಳೀಯ ಆಡಳಿತ ನಿಗದಿಪಡಿಸಿದ ಸ್ಥಳದಲ್ಲಿ ವಿಸರ್ಜನೆ ಕಾರ್ಯಕ್ರಮಗಳು ಜರುಗುತ್ತವೆ. ಈ ಸಂದರ್ಭದಲ್ಲಿ ಶಾಂತಿ-ಸುವ್ಯವಸ್ಥೆ ಕಾಪಾಡುವ ಹಿತದೃಷ್ಟಿಯಿಂದ ಗಣೇಶ ಮೂತಿಗಳ 5, 7, 9, 11ನೇ ದಿನಗಳ ವಿಸರ್ಜನೆ ಸಮಯದಲ್ಲಿ ಸಂಬಂಧಪಟ್ಟ ಪೊಲೀಸ್ ಠಾಣಾ ವ್ಯಾಪ್ತಿಯಲ್ಲಿ ಮದ್ಯ ಸಾಗಾಟಮತ್ತು ಮದ್ಯ ಮಾರಾಟ ಈ ಕೆಳಗಿನಂತೆ ನಿಷೇಧಿಸಲಾಗಿದೆ.

ವಿಸರ್ಜನೆಯ 7ನೇ ದಿನವಾದ ಸೆ.13ರ ಬೆಳಿಗ್ಗೆ 6 ಗಂಟೆಯಿಂದ ಸೆ.14ರ ಬೆಳಿಗ್ಗೆ 6 ಗಂಟೆಯವರೆಗೆ ಗದಗ, ಶಿರಹಟ್ಟಿ, ಲಕ್ಷ್ಮೇಶ್ವರ, ನರಗುಂದ, ಮುಂಡರಗಿ, ರೋಣ, ಗಜೇಂದ್ರಗಡ ತಾಲೂಕುಗಳಲ್ಲಿ, 9ನೇ ದಿನವಾದ ಸೆ.15ರ ಬೆಳಿಗ್ಗೆ 6 ಗಂಟೆಯಿಂದ ಸೆ.16ರ



ಬೆಳಿಗ್ಗೆ 6 ಗಂಟೆಯವರೆಗೆ ಗದಗ, ಶಿರಹಟ್ಟಿ, ಲಕ್ಷ್ಮೇಶ್ವರ, ನರಗುಂದ, ಮುಂಡರಗಿ, ರೋಣ, ಗಜೇಂದ್ರಗಡ ತಾಲೂಕುಗಳಲ್ಲಿ, 11ನೇ ದಿನವಾದ ಸೆ.17ರ ಬೆಳಿಗ್ಗೆ 6 ಗಂಟೆಯಿಂದ ಸೆ.18ರ ಬೆಳಿಗ್ಗೆ 6 ಗಂಟೆಯವರೆಗೆ ಗದಗ, ಲಕ್ಷ್ಮೇಶ್ವರ, ನರಗುಂದ, ರೋಣ, ಗಜೇಂದ್ರಗಡ ತಾಲೂಕುಗಳಲ್ಲಿ, 13ನೇ ದಿನವಾದ ಸೆ.19ರ ಬೆಳಿಗ್ಗೆ 6 ಗಂಟೆಯಿಂದ ಸೆ.20ರ ಬೆಳಿಗ್ಗೆ 6 ಗಂಟೆಯವರೆಗೆ ಲಕ್ಷ್ಮೇಶ್ವರ ತಾಲೂಕಿನಲ್ಲಿ, 17ನೇ ದಿನವಾದ ಸೆ.23ರಂದು ಬೆಳಿಗ್ಗೆ 6 ಗಂಟೆಯಿಂದ ಸೆ.24ರ ಬೆಳಿಗ್ಗೆ 6 ಗಂಟೆಯವರೆಗೆ ಲಕ್ಷ್ಮೇಶ್ವರ ತಾಲೂಕಿನಲ್ಲಿ, 21ನೇ ದಿನವಾದ ಸೆ.27ರ ಬೆಳಿಗ್ಗೆ 6 ಗಂಟೆಯಿಂದ ಸೆ.28ರ ಬೆಳಿಗ್ಗೆ 6 ಗಂಟೆಯವರೆಗೆ ಗದಗ-ಬೆಟಗೇರಿ ನಗರಸಭೆ ವ್ಯಾಪ್ತಿಯಲ್ಲಿ ಮಾತ್ರ ಮದ್ಯ ಮಾರಾಟ ಮತ್ತು ಸಾಗಾಟ ನಿಷೇಧಿಸಲಾಗಿದೆ.

ಮೇಲ್ಕಾಣಿಸಿದ ಪೊಲೀಸ್ ಠಾಣಾ ವ್ಯಾಪ್ತಿಯಲ್ಲಿ ಸದರ ದಿನಗಳಂದು ಬಾರುಗಳು, ಕ್ಲಬ್ಬುಗಳು, ಬಿಯರ್, ಭಾರತೀಯ ತಯಾರಿಕೆಯ ಮದ್ಯದ ಅಂಗಡಿಗಳನ್ನು ಮುಚ್ಚತಕ್ಕದ್ದು. ಅಲ್ಲದೇ ಪರಿಸ್ಥಿತಿಗೆ ಅನುಗುಣವಾಗಿ ಸಾರ್ವಜನಿಕ ಶಾಂತತೆಯನ್ನು ಕಾಯ್ದುಕೊಳ್ಳುವ ದೃಷ್ಟಿಯಿಂದ ವಲಯ ಅಬಕಾರಿ ಇನ್ಸ್‌ಪೆಕ್ಟರ್ ಹಾಗೂ ಅಬಕಾರಿ ಉಪ ಆಯುಕ್ತರು, ಕನಾಟಕ ಅಬಕಾರಿ ಕಾಯ್ದೆಯನ್ವಯ ಸೂಕ್ತ ಕ್ರಮ ಕೈಗೊಳ್ಳಬೇಕೆಂದು ಜಿಲ್ಲಾಧಿಕಾರಿ ಹಾಗೂ ಜಿಲ್ಲಾ ದಂಡಾಧಿಕಾರಿಗಳಾದ ಗೋವಿಂದರೆಡ್ಡಿ ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

### ವಿವಿಧ ಇಲಾಖೆಗಳ ಗ್ರುಪ್ ಬಿ ವೃಂದದ (ಆರ್‌ಪಿಸಿ) ಹುದ್ದೆಗಳಿಗೆ ಪರೀಕ್ಷೆ

# ಪರೀಕ್ಷಾ ಕೇಂದ್ರಗಳ ಸುತ್ತ ಪ್ರತಿಬಂಧಕಾಜ್ಞೆ

■ ವಿಜಯಸಾಕ್ಷಿ ಸುದ್ದಿ, ಗದಗ

ಕರ್ನಾಟಕ ಲೋಕಸೇವಾ ಆಯೊಗವು ವಿವಿಧ ಇಲಾಖೆಗಳ ಗ್ರುಪ್ ಬಿ ವೃಂದದ (ಆರ್‌ಪಿಸಿ) ಹುದ್ದೆಗಳಿಗೆ ಕನ್ನಡ ಭಾಷಾ ಪರೀಕ್ಷೆ ಮತ್ತು ಸ್ಪರ್ಧಾತ್ಮಕ ಪರೀಕ್ಷೆಗಳನ್ನು ಸೆ.14 ಮತ್ತು ಸೆ.15ರಂದು ನಡೆಸಲಿದೆ. ಪರೀಕ್ಷಾ ಸಮಯದಲ್ಲಿ ಅವ್ಯವಹಾರ ತಡೆಗಟ್ಟಲು ಮತ್ತು ಪರೀಕ್ಷಾ ಕೇಂದ್ರಗಳಲ್ಲಿ ಶಿಸ್ತು, ಶಾಂತಿ, ಸುವ್ಯವಸ್ಥೆ ಕಾಪಾಡುವ ಹಿತದೃಷ್ಟಿಯಿಂದ ಸದರ ಪರೀಕ್ಷಾ ಕೇಂದ್ರದ ಸುತ್ತ 200 ಮೀಟರ್ ಪ್ರದೇಶವನ್ನು ನಿಷೇಧಿತ ಪ್ರದೇಶವನ್ನಾಗಿ ಘೋಷಿಸಲಾಗಿದೆ.

ಪರೀಕ್ಷಾರ್ಥಿಗಳು ಹಾಗೂ ಪರೀಕ್ಷೆಯಲ್ಲಿ ಕಾರ್ಯನಿರ್ವಹಿಸುವ ಅಧಿಕಾರಿಗಳು ಮತ್ತು ಸಿಬ್ಬಂದಿಗಳನ್ನು ಹೊರತುಪಡಿಸಿ ಇತರ ಯಾವುದೇ ವ್ಯಕ್ತಿ ಅಥವಾ ಐದು ಐದಕ್ಕಿಂತ ಹೆಚ್ಚು ಜನರು ಗುಂಪು ಕೂಡುವುದು, ಅಥವಾ ವ್ಯಕ್ತಿಗಳ ಗುಂಪುಗಳ ಪ್ರವೇಶವನ್ನು ಹಾಗೂ ಅನಧಿಕೃತ ವ್ಯಕ್ತಿಗಳಿಗೆ ಪರೀಕ್ಷಾ ಕೇಂದ್ರಗಳ ಪ್ರವೇಶವನ್ನು ನಿರ್ಬಂಧಿಸಿದೆ. ಈ ಪ್ರದೇಶ ವ್ಯಾಪ್ತಿಯಲ್ಲಿ ಬರುವ ಝೆರಾಕ್ಸ್ ಅಂಗಡಿ, ಸೈಬರ್ ಸೆಂಟರ್, ಬುಕ್‌ಸ್ಟಾಲ್, ಫೋ-ಟೋ ಕಾಪಿಯರ್‌ಗಳನ್ನು ಬಂದ್ ಮಾಡಲು ಆದೇಶಿಸಿದೆ. ಈ ಪ್ರದೇಶ ವ್ಯಾಪ್ತಿಯಲ್ಲಿ ಪರೀಕ್ಷೆಗಳು ನಡೆಯುವ ಸಮಯದಲ್ಲಿ ಧ್ವನಿವರ್ಧಕಗಳ ಬಳಕೆಯನ್ನು ನಿರ್ಬಂಧಿಸಿದೆ.



ಪರೀಕ್ಷಾ ದಿನಗಳಂದು ಪರೀಕ್ಷಾ ಕೇಂದ್ರಗಳಿಗೆ ವಿದ್ಯಾರ್ಥಿಗಳು ಆಗಮಿಸುವ ಸಮಯ ಮತ್ತು ಹೊರಹೋಗುವ ಸಮಯದಲ್ಲಿ ಮಾತ್ರ ಚಿತ್ರೀಕರಿಸಲು ಮಾಧ್ಯಮದವರಿಗೆ ಅವಕಾಶವಿದ್ದು, ಪರೀಕ್ಷಾ ಗೌಪ್ಯತೆ ದೃಷ್ಟಿಯಿಂದ ಪರೀಕ್ಷಾ ಕೊಠಡಿಗಳಲ್ಲಿ ಪ್ರವೇಶ, ಚಿತ್ರೀಕರಣ ಇತ್ಯಾದಿಗಳನ್ನು ಸಂಪೂರ್ಣವಾಗಿ ನಿಷೇಧಿಸಿದೆ.

ಪರೀಕ್ಷೆಗೆ ಹಾಜರಾಗುವ ಅಭ್ಯರ್ಥಿಗಳು, ಪರೀಕ್ಷಾ ಕೇಂದ್ರದಲ್ಲಿ ಪ್ರಿಸ್ಕಿಂಗ್ ನಡೆಸುವ ಸಿಬ್ಬಂದಿಯೊಂದಿಗೆ ಮತ್ತು ಪರೀಕ್ಷಾ ಕೊಠಡಿಯ ಸಂವೀಕ್ಷಕರೊಂದಿಗೆ ಸಹಕರಿಸಿ ತಪಾಸಣೆಗೊಳಗಾಗುವುದು ಕಡ್ಡಾಯವಾದೆ. ಪರೀಕ್ಷೆಗೆ ಹಾಜರಾಗುವ ಎಲ್ಲ ಅಭ್ಯರ್ಥಿಗಳು ಆಯೋಗವು ನಡೆಸುವ ಹ್ಯಾಂಡ್‌ಹೆಲ್ಡ್ ಮೆಟಲ್ ಡಿಟೆಕ್ಟರ್ ಯಂತ್ರದಿಂದ ತಪಾಸಣೆಗೆ (ಫ್ರಿಸ್ಕಿಂಗ್) ಒಳಗಾಗುವುದು ಕಡ್ಡಾಯವಾಗಿದೆ. ಮೊಬೈಲ್/ಸೆಲ್ಯೂಲಾರ್ ಫೋನ್, ಟ್ಯಾಬ್ಲೆಟ್, ಪೆನ್‌ಡ್ರೈವ್, ಬ್ಲೂಟೂತ್ ಡಿವೈಸ್, ಸ್ಮಾರ್ಟ ವಾಚ್, ಕ್ಯಾಲ್ಕುಲೇಟರ್ ಮತ್ತು ಇತರೆ ಯಾವುದೇ ರೀತಿಯ ಎಲೆಕ್ಟ್ರಾನಿಕ್ಸ್ ಉಪಕರಣಗಳು ಅಥವಾ ಲಾಗ್ ಟೇಬಲ್ಸ್, ಕೈ ಚೀಲ, ಪರ್ಸ, ನೋಟುಗಳು, ಚಾರ್ಟ, ಬಿಡಿ ಹಾಳೆಗಳು ಅಥವಾ ರೆಕಾರ್ಡಿಂಗ್ ವಸ್ತುಗಳನ್ನೂ ಸೇರಿದಂತೆ ಇನ್ನಿತರೆ ಯಾವುದೇ ರೀತಿಯ ಉಪಕರಣಗಳನ್ನು ಕೊಂಡೊಯ್ಯುವುದನ್ನು ನಿಷೇಧಿಸಲಾಗಿದೆ. ಹಿಯರಿಂಗ್ ಏಡ್ ಉಪಕರಣ ಧರಿಸಿರುವ ಅಭ್ಯರ್ಥಿಗಳು ವೈದ್ಯಕೀಯ ದಾಖಲೆಗಳೊಂದಿಗೆ ಪರೀಕ್ಷೆ ಪ್ರಾರಂಭವಾಗುವ ಎರಡು ಗಂಟೆ ಮುಂಚಿತವಾಗಿ ಸಂಪೂರ್ಣ ವಿಶೇಷ ತಪಾಸಣೆಗೆ ಒಳಪಡುವುದು ಕಡ್ಡಾಯವಾಗಿರುತ್ತದೆ.

> ಜಿಲ್ಲೆಯ 17 ಪರೀಕ್ಷಾ ಕೇಂದ್ರಗಳಲ್ಲಿ ಸೆ.14ರಂದು ಮಧ್ಯಾಹ್ನ 2 ಗಂಟೆಯಿಂದ 4 ಗಂಟೆಯವರೆಗೆ ಹಾಗೂ ಜಿಲ್ಲೆಯ 19 ಪರೀಕ್ಷಾ ಕೇಂದ್ರಗಳಲ್ಲಿ ಸೆ. 15ರಂದು ಬೆಳಿಗ್ಗೆ 10 ಗಂಟೆಯಿಂದ ಮಧ್ಯಾಹ್ನ 11.30ರವರೆಗೆ ಹಾಗೂ ಮಧ್ಯಾಹ್ನ 2ರಿಂದ 4ರವರೆಗೆ ಪರಿಕ್ಷೆಗಳು ಜರುಗಲಿವೆ. ಸೆ 14 ಮತ್ತು 15 ರಂದು ಬೆ 8 ಗಂಟೆಯಿಂದ ಸಂಜೆ 6 ಗಂಟೆಯವರೆಗೆ ಪ್ರತಿಬಂಧಕಾಜ್ಞೆ ಜಾರಿಗೊಳಿಸಲಾಗಿದೆ.
>
> ಕರ್ನಾಟಕ ಲೋಕಸೇವಾ ಆಯೋಗವು ಅಭ್ಯರ್ಥಿಗಳ ಪ್ರವೇಶ ಪತ್ರದಲ್ಲಿ ತಿಳಿಸಿರುವ ವಸ್ತ್ರ ಸಂಹಿತೆಯನ್ನು ಅಭ್ಯರ್ಥಿಗಳು ಕಡ್ಡಾಯವಾಗಿ ಪಾಲಿಸತಕ್ಕದ್ದು ಎಂದು ಜಿಲ್ಲಾ ದಂಡಾಧಿಕಾರಿಗಳೂ ಆಗಿರುವ ಜಿಲ್ಲಾಧಿಕಾರಿ ಗೋವಿಂದರೆಡ್ಡಿ ಅವರು ಆದೇಶಿಸಿದ್ದಾರೆ.

## ಸಂಪಾದಕೀಯ

# ರಾಹುಲ್ ಗಾಂಧಿ ಭಾರತವನ್ನು ಪ್ರತಿನಿಧಿಸುವ ಆಶಯ ವ್ಯಕ್ತಪಡಿಸಲಿ

ಇವತ್ತಿಗೆ ಅಂದರೆ ಸೆ. 11ಕ್ಕೆ, ಬರೊಬ್ಬರಿ 130 ವರ್ಷಗಳ ಹಿಂದೆ ಸ್ವಾಮಿ ವಿವೇಕಾನಂದರ ಅಮೆರಿಕಾದಲ್ಲಿ ನಡೆದ ವಿಶ್ವ ಧರ್ಮ ಸಮ್ಮೇಳನದಲ್ಲಿ ಭಾಷಣ ಮಾಡಿದ್ದರು. ಅಮೆರಿಕಾದ ನನ್ನ ಸಹೋದರ, ಸಹೋದರಿಯರೆ ಎನ್ನುವ ಮೂಲಕ ವಿವೇಕಾನಂದರು ಭಾಷಣ ಆರಂಭಿಸುತ್ತಿದ್ದಂತೆ ಸಭೆಯಲ್ಲಿ ಕರತಾಡನ ಶುರುವಾಯಿತು. ವಿವೇಕಾನಂದರು ಆಡಿದ ಆ ಎರಡು ಶಬ್ಧಗಳು ಭಾರತದ ಕುರಿತಾಗಿ ವಿದೇಶಿಗರಲ್ಲಿದ್ದ ಮನೋಭಾವ ಬದಲಾಗಲು ಕಾರಣವಾಯಿತು. ಮುಂದಿನ ಅವರ ಮಾತು, ಪ್ರವಾಸ ಈಗ ಇತಿಹಾಸ.

ಅಂದು ವಿವೇಕಾನಂದರು ವಿಶ್ವ ಧರ್ಮ ಸಮ್ಮೇಳನದಲ್ಲಿ ಭಾರತವನ್ನು ಪ್ರತಿನಿಧಿಸಿ, ಭಾರತೀಯ ಸಂಸ್ಕೃತಿಯನ್ನು ವಿಶ್ವಕ್ಕೆ ಪರಿಚಯಿಸುವ ಕೆಲಸ ಮಾಡಿದರು. ಯಾವ ಉದ್ದೇಶಕ್ಕೆ ಅವರು ಅಮೆರಿಕಾಗೆ ತೆರಳಿದ್ದರೊ, ಆ ಕೆಲಸದಲ್ಲಿ ಅವರು ಯಶಸ್ವಿಯಾಗಿ ಮರಳಿದರು. ವಿವೇಕಾನಂದರು ಅಮೆರಿಕಾಗೆ ತೆರಳಿದ್ದ ಸಂದರ್ಭದಲ್ಲಿ ಭಾರತದಲ್ಲಿಯೂ ಅನೇಕ ಸಾಮಾಜಿಕ ಸಮಸ್ಯೆಗಳಿದ್ದವು. ಈಗಲೂ ಇವೆ. ಮುಂದೆಯೂ ಅವು ಇರುತ್ತವೆ. ಆದರೆ ಎಲ್ಲಿಯೂ ನಮ್ಮ ದೌರ್ಬಲ್ಯಗಳನ್ನು ಹೇಳಿಕೊಳ್ಳದೆ, ಭಾರತದ ಸಾಮರ್ಥ್ಯ, ಸಂಸ್ಕೃತಿಯನ್ನು ಬಿತ್ತರಿಸಿ ಬಂದರು.

ಆದರೆ ಇವತ್ತು ರಾಹುಲ್ ಗಾಂಧಿ ಅಮೆರಿಕಾದಲ್ಲಿ ಭಾರತದ ಮಾನ ಹರಾಜು ಹಾಕುವಂಥ ಹೇಳಿಕೆ ಕೊಡುತ್ತಿದ್ದಾರೆ. ರಾಹುಲ್ ಗಾಂಧಿ ಆಡಿರುವ ಮಾತುಗಳಲ್ಲಿ ನಿಜಾಂಶ ಇಲ್ಲ ಎಂದಲ್ಲ. ಆದರೆ ವಿದೇಶದ ನೆಲದಲ್ಲಿ ಸ್ವದೇಶದ ಬಗ್ಗೆ ಕೆಟ್ಟ ಮಾತುಗಳನ್ನು ಆಡುವುದು ಎಷ್ಟರ ಮಟ್ಟಿಗೆ ಸರಿ ಎನ್ನುವುದನ್ನು ಅರ್ಥ ಮಾಡಿಕೊಳ್ಳಬೇಕು.

ಭಾರತದಲ್ಲಿ ನಿರುದ್ಯೋಗ ಸಮಸ್ಯೆ, ಉತ್ಪಾದನೆ ಕುಂಠಿತ, ಮೀಸಲಾತಿ, ಭ್ರಷ್ಟಾಚಾರ ಇವೆಲ್ಲಾ ಸಮಸ್ಯೆಗಳಿವೆ. ಅದನ್ನ ಮನೆಯಲ್ಲೆ ಚರ್ಚೆ ಮಾಡಬೇಕು. ಆ ಸಮಸ್ಯೆ ಹೇಗೆ ಪರಿಹರಿಸಬೇಕು ಎಂದು ಸಲಹೆ ನೀಡುವಂಥ ಸಂವಿಧಾನಿಕ ಸ್ಥಾನಮಾನಗಳೂ ಇವೆ. ಆದರೂ ಅದೆಲ್ಲವನ್ನು ಬಿಟ್ಟು ನಾಲ್ಕು ಗೋಡೆಗಳ ಮಧ್ಯದ ವಿಷಯವನ್ನು ಬೀದಿಗೆ ತಂದಂತಾಗಿದೆ ರಾಹುಲ್ ಗಾಂಧಿ ನಡೆ.

ಭಾರತದ ಸಮಸ್ಯೆಗಳ ಬಗ್ಗೆ ವಿದೇಶಿಗರಿಗೆ ಮಾಹಿತಿ ಇಲ್ಲ ಅಂತಲ್ಲ. ವಿದೇಶಿ ಮಾಧ್ಯಮಗಳು ಸಹ ಇಲ್ಲಿನ ದುರಾಡಳಿತ, ವ್ಯವಸ್ಥೆ ಬಗ್ಗೆ ಸಾಕಷ್ಟು ಬರೆದಿವೆ. ಅನೇಕ ದೇಶದ ಜನರಿಗೆ ಇಲ್ಲಿನ ಸಾಮಾಜಿಕ ಸಮಸ್ಯೆಗಳ ಬಗ್ಗೆ ಅರಿವಿದೆ. ಆದರೆ ಭಾರತದ ಪ್ರತಿನಿಧಿಯೊಬ್ಬ ಆ ರೀತಿ ಬಹಿರಂಗವಾಗಿ ತನ್ನ ದೇಶದ ಬಗ್ಗೆ ಹೇಳಿಕೊಳ್ಳುವುದು ಜನಸಾಮಾನ್ಯರೂ ಒಪ್ಪಿಕೊಳ್ಳುವುದಿಲ್ಲ.

ಇಂದಿರಾಗಾಂಧಿ ಕಾಲದಲ್ಲಿ ಅಟಲ್ ಬಿಹಾರಿ ವಾಜಪೇಯಿ ಅವರನ್ನು ಭಾರತ ಸರಕಾರ ತನ್ನ ಪ್ರತಿನಿಧಿಯಾಗಿ ವಿದೇಶಕ್ಕೆ ಕಳುಹಿಸಿದ ದೇಶದಲ್ಲಿ, ಇವತ್ತು ದೇಶದ ಬಗ್ಗೆಯೆ ಕೆಟ್ಟದಾಗಿ ಹೊರದೇಶದಲ್ಲಿ ಬಿಂಬಿಸುವ ಅವಶ್ಯಕತೆ ಏನಿತ್ತು. ಅಷ್ಟಕ್ಕೂ ಅಮೆರಿಕಾಗೆ ಹೋಗಿದ್ದ ಉದ್ದೇಶವನ್ನಾದರೂ ರಾಹುಲ್ ಗಾಂಧಿ ಅರ್ಥ ಮಾಡಿಕೊಳ್ಳಬೇಕು.

### ಶ್ರೀ ಜ. ರೇಣುಕಾಚಾರ್ಯ ಗುರುಕುಲ, ಸಭಾಭವನದ ಶಿಲಾನ್ಯಾಸ ಸಮಾರಂಭದಲ್ಲಿ ರಂಭಾಪುರಿ ಶ್ರೀಗಳು

# ಗುರುಕುಲ ಮಾದರಿಯ ಶಿಕ್ಷಣದ ಅಗತ್ಯವಿದೆ

■ ವಿಜಯಸಾಕ್ಷಿ ಸುದ್ದಿ, ರಾಮದುರ್ಗ

ವೀರಶೈವ ಧರ್ಮ ಅತ್ಯಂತ ಪ್ರಾಚೀನವಾಗಿದ್ದು, ಉತ್ಕೃಷ್ಟ ಸಂಸ್ಕೃತಿ ಹೊಂದಿದೆ. ಇದರ ಉಳಿವು ಮತ್ತು ಬೆಳವಣಿಗೆಗಾಗಿ ಗೊಡಚಿ ವೀರಭದ್ರೇಶ್ವರ ಕ್ಷೇತ್ರದಲ್ಲಿ ಶ್ರೀ ಜಗದ್ಗುರು ರೇಣುಕಾಚಾರ್ಯ ಗುರುಕುಲ ಪ್ರಾರಂಭಕ್ಕೆ ಉದ್ದೇಶಿಸಲಾಗಿದೆ ಎಂದು ಬಾಳೆಹೊನ್ನೂರು ಶ್ರೀ ರಂಭಾಪುರಿ ಡಾ.ವೀರಸೋಮೇಶ್ವರ ಜಗದ್ಗುರುಗಳು ಅಭಿಪ್ರಾಯಪಟ್ಟರು.



ಅವರು ಮಂಗಳವಾರ ತಾಲೂಕಿನ ಗೊಡಚಿ ಶ್ರೀ ವೀರಭದ್ರೇಶ್ವರ ಕ್ಷೇತ್ರದಲ್ಲಿ ಶ್ರೀ ಜಗದ್ಗುರು ರೇಣುಕಾಚಾರ್ಯ ಗುರುಕುಲ ಮತ್ತು ಸಭಾ ಭವನದ ಶಿಲಾನ್ಯಾಸ ಸಮಾರಂಭದ ಸಾನ್ನಿಧ್ಯ ವಹಿಸಿ ಆಶೀರ್ವಚನ ನೀಡುತ್ತಿದ್ದರು.

ಸಕಲ ಜೀವಾತ್ಮರಿಗೆ ಒಳಿತನ್ನೇ ಬಯಸಿದ ವೀರಶೈವ ಧರ್ಮದ ಇತಿಹಾಸ ಮತ್ತು ಪರಂಪರೆ ಅಪೂರ್ವವಾಗಿದೆ. ಶ್ರೀ ಜಗದ್ಗುರು ರೇಣುಕಾಚಾರ್ಯರು ಬೋಧಿಸಿದ ಶಿವಾದ್ವೈತ ತತ್ವ ಸಿದ್ಧಾಂತ ಜೀವಾತ್ಮ ಪರಮಾತ್ಮನೆಡೆಗೆ ಸಾಗಲು ಸಹಕಾರಿಯಾಗಿದೆ. ಬೆಳೆಯುತ್ತಿರುವ ಯುವ ಜನಾಂಗದಲ್ಲಿ ಅರಿವು ಆಚರಣೆ ಇಲ್ಲದ ಕಾರಣ ಜೀವನದಲ್ಲಿ ತೊಳಲಾಟವನ್ನು ಕಾಣುತ್ತೇವೆ. ಈ ಕೊರತೆಯನ್ನು ಪರಿಹಾರ ಮಾಡಲು ಗುರುಕುಲ ಮಾದರಿಯ ಶಿಕ್ಷಣ ಈ ಸಂಸ್ಕೃತಿಯ ಉಳಿವಿಗೆ ಮುಖ್ಯವಾಗಿದೆ. ಆದ್ದರಿಂದ ಪಾಟೀಲ ಬಂಧುಗಳು ಶ್ರೀ ರಂಭಾಪುರಿ ಪೀಠಕ್ಕೆ ದಾನ ಮಾಡಿದ ಒಂದು ಎಕರೆ ನಿವೇಶನದಲ್ಲಿ ಶ್ರೀ ಜಗದ್ಗುರು ರೇಣುಕಾಚಾರ್ಯ ಮಂದಿರ, ಗುರುಕುಲ, ಹಾಗೂ ಸಭಾ ಭವನ ಕಟ್ಟಡಗಳನ್ನು ಭಕ್ತರ ಸಹಕಾರದಿಂದ ಹಂತ ಹಂತವಾಗಿ ಸಂಪೂರ್ಣವಾಗಿ ಪೂರ್ಣಗೊಳಿಸುವ ಸದಿಚ್ಛೆ ತಮಗಿದೆ ಎಂದರು.


ಸಸಿಗೆ ನೀರೆರೆದು ಸಮಾರಂಭ ಉದ್ಘಾಟಿಸಿದ ಬೆಳಗಾವಿ ಸಂಸದ ಹಾಗೂ ಮಾಜಿ ಮುಖ್ಯ ಮಂತ್ರಿ ಜಗದೀಶ ಶೆಟ್ಟರ್ ಮಾತನಾಡಿ, ಭಾರತೀಯ ತತ್ವಜ್ಞಾನ ಹಾಗೂ ಮಠಗಳ ಪರಂಪರೆ ಬಹಳ ಪ್ರಾಚೀನವಾದುದು. ಇವತ್ತಿನ ಆಧುನಿಕ ಕಾಲದಲ್ಲಿ ಸಂಸ್ಕೃತಿ-ಆಚರಣೆ ಮರೆತು ಭಿನ್ನ ದಾರಿಯಲ್ಲಿ ನಡೆದು ಮಾನಸಿಕ ಶಾಂತಿ ಕಳೆದುಕೊಳ್ಳುತ್ತಿದ್ದಾರೆ. ಇಂಥ ಸಂದರ್ಭದಲ್ಲಿ ವೀರಶೈವ ಧರ್ಮ ಸಂಸ್ಕೃತಿಯ ಬೆಳವಣಿಗೆಗಾಗಿ ಶ್ರೀ ರಂಭಾಪುರಿ ಜಗದ್ಗುರುಗಳು ಗುರುಕುಲ ಮತ್ತು ಸಮುದಾಯ ಭವನ ನಿರ್ಮಿಸುತ್ತಿರುವುದು ಈ ಭಾಗದ ಭಕ್ತರ ಸೌಭಾಗ್ಯವಾಗಿದೆ ಎಂದರು.

ಸಂಸದರ ನಿಧಿಯಿಂದ ಈ ಕಾರ್ಯಕ್ಕೆ ವಿಶೇಷ ಅನುದಾನ ಕೊಡುವುದಾಗಿ ಘೋಷಿಸಿದ ಅವರು, ಬೆಳಗಾವಿ ಲೋಕಸಭಾ ಕ್ಷೇತ್ರಕ್ಕೆ ತಮ್ಮನ್ನು ಆಯ್ಕೆ ಮಾಡಿದ್ದಕ್ಕೆ ಜಿಲ್ಲೆಯ ಜನತೆಗೆ ಕೃತಜ್ಞತೆಯನ್ನು ಸಲ್ಲಿಸಿದರು. ಮಾಜಿ ವಿಧಾನ ಪರಿಷತ್ತಿನ ಸಚೇತಕ ಮಹಾಂತೇಶ ಕವಟಗಿಮಠ ಅವರು ಈ ಕಾರ್ಯಕ್ಕೆ 5 ಲಕ್ಷ ರೂ. ದಾನವಾಗಿ ಕೊಡುವ ಭರವಸೆಯಿತ್ತರು. ಎಲ್ಲ ಶ್ರೀಗಳ ಪರವಾಗಿ ಹುಕ್ಕೇರಿ ಹಿರೇಮಠದ ಚಂದ್ರಶೇಖರ ಶಿವಾಚಾರ್ಯರು ಮಾತನಾಡಿ ತಮ್ಮ ಮಠದಿಂದ ಕಟ್ಟಡಕ್ಕೆ 5 ಲಕ್ಷ ರೂ ಕೊಡುವುದಾಗಿ ತಿಳಿಸಿದರು.

> ನೇತೃತ್ವ ವಹಿಸಿದ ಎಂ.ಚಂದರಗಿ ಮತ್ತು ಕಟಕೋಳ ಹಿರೇಮಠದ ವೀರಭದ್ರ ಶಿವಾಚಾರ್ಯರು ಮಾತನಾಡಿ, ಬಹು ದಿನಗಳ ಕನಸು ನನಸಾಗುವ ಸುದಿನ ಕೂಡಿ ಬಂದಿದೆ. ನಮ್ಮೆಲ್ಲರ ಸಂಕಲ್ಪ ಗಟ್ಟಿಗೊಂಡು ದಸರಾ ಸವಿ ನೆನಪಿಗಾಗಿ ಗುರುಕುಲ, ಮಂದಿರ, ಸಭಾಭವನ ನಿರ್ಮಾಣಕ್ಕೆ ಭೂಮಿ ಪೂಜೆ ಜರುಗಿದ್ದು ಈ ಭಾಗದ ಭಕ್ತರ ಸೌಭಾಗ್ಯವೆಂದರೆ ತಪ್ಪಾಗದು. ಆದಷ್ಟು ಬೇಗ ಕಾರ್ಯ ಪೂರ್ಣಗೊಳಿಸಲು ಎಲ್ಲರ ಸಹಕಾರ ಅವಶ್ಯಕವೆಂದರು.

ಮಲ್ಲಣ್ಣ ಯಾದವಾಡ ಪ್ರಾಸ್ತಾವಿಕ ನುಡಿಗಳನ್ನಾಡಿದರು. ಸಮಾರಂಭದಲ್ಲಿ ತೊರಗಲ್ಲ, ಮುಳ್ಳೂರು, ಬನ್ನೂರು, ವಿಮಲಖೇಡ, ಭಾಗೋಜಿಕೊಪ್ಪ, ಚಿಪ್ಪಲಕಟ್ಟಿ, ಸಂಗೊಳ್ಳಿ, ಕುಂದರಗಿ, ಸತ್ತಿಗೇರಿ, ಹೊಸಯರಗಟ್ಟಿ, ಕಬ್ಬೂರು, ಲೋಕಾಪುರ ಶ್ರೀಗಳು ಪಾಲ್ಗೊಂಡಿದ್ದರು. ಮಹಾಂತೇಶ ಶಾಸ್ತ್ರಿ, ಟಿ.ಪಿ. ಮನೋಳಿ, ಎಸ್.ಬಿ. ಹಿರೇಮಠ, ಎಂ.ಕೊಟ್ರೇಶಪ್ಪ ಮೊದಲ್ಗೊಂಡು ಹಲವಾರು ಗಣ್ಯರು ಇದ್ದರು.


ಬೀಳಗಿ ರಾಜೇಶ ಸ್ವಾಗತಿಸಿದರು. ಸವಣೂರಿನ ಡಾ. ಗುರುಪಾದಯ್ಯ ಸಾಲಿಮಠ ನಿರೂಪಿಸಿದರು. ಸಮಾರಂಭಕ್ಕೂ ಮುನ್ನ ಬಾಳೆಹೊನ್ನೂರು ಶ್ರೀ ರಂಭಾಪುರಿ ಜಗದ್ಗುರುಗಳು ಗೊಡಚಿ ಶ್ರೀ ವೀರಭದ್ರೇಶ್ವರ ಸ್ವಾಮಿ ಮತ್ತು ಭದ್ರಕಾಳಿ ಮಂಗಲ ಮೂರ್ತಿಗೆ ಪೂಜೆ ಸಲ್ಲಿಸಿದರು.





ಲಕ್ಷ್ಮೇಶ್ವರದ ಹಾವಳಿ ಆಂಜನೇಯ ದೇವಸ್ಥಾನದ ಪ್ರಾಂಗಣದಲ್ಲಿ ಹಿಂದೂ ಮಹಾಸಭಾದಿಂದ ಪ್ರತಿಷ್ಠಾಪಿಸಿರುವ ಅಖಂಡ ಭಾರತ ಪರಿಕಲ್ಪನೆಯ ಸುಂದರ ಗಣೇಶನ ಮೂರ್ತಿ.





ಲಕ್ಷ್ಮೇಶ್ವರದ ಸೊಪ್ಪಿನಕೇರಿ ಚಳ್ಳ ಮರದ ಓಣಿಯಲ್ಲಿ ಯುವಕ ಮಂಡಳದವರು ಪ್ರತಿಷ್ಠಾಪಿಸಿರುವ ಲಕ್ಷ್ಮೇಶ್ವರ ಕಾ ರಾಜಾ ದೊಡ್ಡ ಲಂಬೋದರನ ಮೂರ್ತಿ.



ಲಕ್ಷ್ಮೇಶ್ವರದ ಬಜಾರ ವ್ಯಾಪಾರಸ್ಥರ ಸಂಘದವರು ಪ್ರತಿಷ್ಠಾಪಿಸಿರುವ ದಗಡೂ ಶೇಟ್ ಮಾದರಿಯ ಗಣೇಶ.



ಲಕ್ಷ್ಮೇಶ್ವರದ ಶ್ರೀ ರಾಘವೇಂದ್ರ ಯುವಕ ಮಂಡಳದವರು ಶ್ರೀ ರಾಘವೇಂದ್ರ ಸ್ವಾಮಿಗಳ ಮಠದ ಹತ್ತಿರ ಪ್ರತಿಷ್ಠಾಪಿಸಿರುವ ಲಕ್ಷ್ಮೇಶ್ವರದ ಸಾಮ್ರಾಟ



ಲಕ್ಷ್ಮೇಶ್ವರದ ಪುರಸಭೆಯ ಆವರಣದಲ್ಲಿ ಪ್ರತಿಷ್ಠಾಪಿಸಿರುವ ಸುಂದರ ವರ್ಣದ ವಿಘ್ನವಿನಾಯಕ



ಲಕ್ಷ್ಮೇಶ್ವರದ ಶ್ರೀ ಸೋಮೇಶ್ವರ ತೇರಿನ ಮನೆಯ ಆವರಣದಲ್ಲಿ ಪ್ರತಿಷ್ಠಾಪಿಸಿರುವ ಸುಂದರ ವರ್ಣದ ವಿಘ್ನವಿನಾಯಕ



ಲಕ್ಷ್ಮೇಶ್ವರ ಬಸ್ತಿಬಣ ಕಾಮನಕಟ್ಟಿ ಪಂಪ ಯುವಕ ಮಂಡಳದವರು ಪ್ರತಿಷ್ಠಾಪಿಸಿರುವ ಸುಂದರವಾದ ವಿನಾಯಕ ಮೂರ್ತಿ



ಸೂರಣಗಿ ಗ್ರಾಮದ ನವಚೇತನ ಯುವಕ ಮಂಡಳದವರು ಪ್ರತಿಷ್ಠಾಪಿಸಿರುವ ಸುಂದರವಾದ ಗಣೇಶ ಮೂರ್ತಿ.

ವಿಶ್ವ ಆತ್ಮಹತ್ಯೆ ತಡೆ ದಿನಾಚರಣೆ-2024 ಕಾರ್ಯಕ್ರಮದಲ್ಲಿ ಸಿ.ಎಸ್. ಶಿವನಗೌಡ್ರ

# ಆತ್ಮಹತ್ಯೆ ಸಾಮಾಜಿಕ ಸಮಸ್ಯೆಯಾಗಿದೆ

■ವಿಜಯಸಾಕ್ಷಿ ಸುದ್ದಿ, ಗದಗ

ಗದಗ ಜಿಲ್ಲಾ ಆಡಳಿತ, ಜಿಲ್ಲಾ ಪಂಚಾಯತ್, ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ, ಜಿಲ್ಲಾ ಮಾನಸಿಕ ಆರೋಗ್ಯ ಕಾರ್ಯಾಕ್ರಮ, ವೈದ್ಯಕೀಯ ಮಹಾವಿದ್ಯಾಲಯ-ಮಾನಸಿಕ ವಿಭಾಗ, ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರ, ಜಿಲ್ಲಾ ವಾರ್ತಾ ಇಲಾಖೆ, ಜಿಲ್ಲಾ ವಕೀಲರ ಸಂಘ ಗದಗ ಹಾಗೂ ಜಿಲ್ಲಾ ಐ.ಇ.ಸಿ ವಿಭಾಗ ಮತ್ತು ತಾಲೂಕಾ ಆರೋಗ್ಯ ಅಧಿಕಾರಿಗಳ ಕಾರ್ಯಾಲಯ ಗದಗ ಇವರುಗಳ ಸಂಯುಕ್ತ ಆಶ್ರಯದಲ್ಲಿ ಬುಧವಾರ ಗದಗ ತಾಲೂಕಾ ಆರೋಗ್ಯ ಅಧಿಕಾರಿಗಳ ಕಾರ್ಯಾಲಯದಲ್ಲಿ 'ವಿಶ್ವ ಆತ್ಮಹತ್ಯೆ ತಡೆ ದಿನಾಚರಣೆ-2024'ರ ಅಂಗವಾಗಿ ಜಾಗೃತಿ ರಥ ಹಾಗೂ ಜಾಥಾ ಕಾರ್ಯಕ್ರಮ ಜರುಗಿತು.

ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರದ ಸದಸ್ಯಕಾರ್ಯದರ್ಶಿ ಸಿ.ಎಸ್.ಶಿವನಗೌಡ್ರ ಅವರು ಜಾಗೃತಿ ರಥ ಹಾಗೂ ಜಾಥಾ ಕಾರ್ಯಕ್ರಮಕ್ಕೆ ಚಾಲನೆ ನೀಡಿ ಮಾತನಾಡಿ, ಆತ್ಮಹತ್ಯೆ ಎಂಬುದು ವೈಯಕ್ತಿಕ ಸಮಸ್ಯೆಯಾಗದೇ ಸಾಮಾಜಿಕ ಸಮಸ್ಯೆಯಾಗಿ ಪರಿಣಮಿಸಿದೆ. ಶಾಲಾ-ಕಾಲೇಜು



ಮಕ್ಕಳಲ್ಲಿ ಆತಹತ್ಯೆ ಹೆಚ್ಚಾಗಿ ಕಂಡುಬರುತ್ತದೆ. ಪ್ರತಿ ಸೆಕೆಂಡಿಗೆ ಒಬ್ಬರು ಆತ್ಮಹತ್ಯೆಗೆ ಪ್ರಯತ್ನ ಮಾಡುತ್ತಿದ್ದಾರೆ. 'ಆತ್ಮಹತ್ಯೆಯ ನಿರೂಪಣೆಯನ್ನು ಬದಲಾಯಿಸುವುದು' ಎಂಬ ಘೋಷವಾಕ್ಯ ಪ್ರಮುಖವಾಗಿದೆ. ಸಮಾಜದಲ್ಲಿ ನಾವೆಲ್ಲರೂ ಸೇರಿ ಆತ್ಮಹತ್ಯೆ ತಡೆಗಟ್ಟುವಂತೆ ಅರಿವು ಮೂಡಿಸುವುದು ಎಲ್ಲರ ಆದ್ಯ ಕರ್ತವ್ಯ ಎಂದು ತಿಳಿಸಿದರು.

ಜಿಲ್ಲಾ ಮಾನಸಿಕ ಆರೋಗ್ಯ ಕಾರ್ಯಕ್ರಮ ಅನುಷ್ಠಾನ ಅಧಿಕಾರಿ ಹಾಗೂ ಜಿಲ್ಲಾ ಕುಷ್ಠರೋಗ ನಿಯಂತ್ರಣ ಅಧಿಕಾರಿ ಡಾ. ರಾಜೇಂದ್ರ ಸಿ.ಬಸರಿಗಿಡದ ಸ್ವಾಗತಿಸಿ ವಿಶ್ವ ಆತ್ಮಹತ್ಯೆ ತಡೆ ದಿನಾಚರಣೆಯನ್ನು ಆಚರಿಸುವ ಕುರಿತು ಸಮಗ್ರ ಮಾಹಿತಿ ನೀಡಿ, ಆತ್ಮಹತ್ಯೆಯನ್ನು ತಡೆಗಟ್ಟುವ ಕುರಿತು ಸಮಗ್ರವಾಗಿ ವಿವರಿಸಿದರು.

ಕಾರ್ಯಕ್ರಮದಲ್ಲಿ ಜಿಲ್ಲಾ ಸಮೀಕ್ಷಣಾ ಅಧಿಕಾರಿ ಡಾ. ವೆಂಕಟೇಶ ರಾಠೋಡ, ತಾಲೂಕಾ ಆರೋಗ್ಯ ಅಧಿಕಾರಿಗಳಾದ ಡಾ. ಪ್ರೀತ್ ಖೋನಾ, ಡಾ. ವರ್ಷಾ ಜಿಲ್ಲಾ ಮನೋವೈದ್ಯರು ಹಾಗೂ ಉಪ ಜಿಲ್ಲಾ ಆರೋಗ್ಯ ಶಿಕ್ಷಣಾಧಿಕಾರಿಗಳು, ಜಿಲ್ಲಾ ಮಾನಸಿಕ ಆರೋಗ್ಯ ವಿಭಾಗ, ಜಿಲ್ಲಾ ಸಮೀಕ್ಷಣಾ ಘಟಕ, ಜಿಲ್ಲಾ ಕುಷ್ಠರೋಗ ನಿಯಂತ್ರಣ ವಿಭಾಗ, ತಾಲೂಕಾ ಆರೋಗ್ಯ ಅಧಿಕಾರಿಗಳ ಕಚೇರಿಯ ಅಧಿಕಾರಿಗಳು ಹಾಗೂ ಸಿಬ್ಬಂದಿಗಳು, ಗದಗ ನಗರದ ಪಿ.ಎಚ್.ಸಿ.ಓ ಮತ್ತು ಆಶಾ ಕಾರ್ಯಕರ್ತೆಯರು ಭಾಗವಹಿಸಿದ್ದರು. ಜಿಲ್ಲಾ ಆರೋಗ್ಯ ಶಿಕ್ಷಣಾಧಿಕಾರಿ ರೂಪಸೇನ ಚವ್ಹಾಣ ವಂದಿಸಿದರು.

ಅಧ್ಯಕ್ಷತೆ ವಹಿಸಿದ ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಅಧಿಕಾರಿ ಡಾ. ಎಸ್.ಎಸ್. ನೀಲಗುಂದ ಮಾತನಾಡಿ, ಆತ್ಮಹತ್ಯೆ ಕೇವಲ ವ್ಯಕ್ತಿಗತ ಸಮಸ್ಯೆಯಲ್ಲ. ಇದು ಸಮಾಜದ ಸಮಸ್ಯೆಯಾಗಿದೆ. ಹಾಗಾಗಿ ಇದರ ಬಗ್ಗೆ ಅರಿವು ಮೂಡಿಸುವುದು ಅಗತ್ಯವಾಗಿದೆ. ಕಷ್ಟ ಕಾರ್ಪಣ್ಯಗಳು ಎಲ್ಲರಿಗೂ ಬರುತ್ತವೆ. ಅವುಗಳನ್ನು ಧೈರ್ಯದಿಂದ ಎದುರಿಸಬೇಕು ಎಂದು ಹೇಳಿದರು.

## ಅರ್ಜಿ ಆಹ್ವಾನ

■ವಿಜಯಸಾಕ್ಷಿ ಸುದ್ದಿ, ಗದಗ

ಸರ್ಕಾರದ ಆದೇಶದನ್ವಯ ಡಿಸೆಂಬರ್ 3 ರಂದು ವಿಶ್ವ ವಿಕಲಚೇತನರ ದಿನಾಚರಣೆಯನ್ನು ರಾಜ್ಯಮಟ್ಟದಲ್ಲಿ ಆಚರಿಸುವ ಸಂದರ್ಭದಲ್ಲಿ ವಿಕಲಚೇತನರ ಕ್ಷೇತ್ರದಲ್ಲಿ ಗಣನೀಯ ಸೇವೆ ಸಲ್ಲಿಸಿದ ಸಂಸ್ಥೆಗಳಿಗೆ, ವಿಶೇಷ ಶಿಕ್ಷಕರಿಗೆ, ವೈಯಕ್ತಿಕ ವಿಭಾಗಕ್ಕೆ ಪ್ರಶಸ್ತಿಗಳನ್ನು ನೀಡಲು ಅರ್ಜಿಗಳನ್ನು ಆಹ್ವಾನಿಸಲಾಗಿದೆ. ಜಿಲ್ಲಾ ವ್ಯಾಪ್ತಿಯಲ್ಲಿ ವಿಕಲಚೇತನರ ಕ್ಷೇತ್ರದಲ್ಲಿ ಉತ್ತಮವಾಗಿ ಕಾರ್ಯನಿರ್ವಹಿಸುತ್ತಿರುವ ಸಂಸ್ಥೆಗಳಿಗೆ, ವಿಶೇಷ ಶಿಕ್ಷಕರಿಗೆ, ವೈಯಕ್ತಿಕ ವಿಭಾಗಕ್ಕೆ ನಿಗದಿತ ನಮೂನೆಯ ಎಲ್ಲಾ ಕಾಲಂಗಳನ್ನು ಕನ್ನಡ ಭಾಷೆಯಲ್ಲಿ ಭರ್ತಿ ಮಾಡಿ ಅಗತ್ಯ ದಾಖಲಾತಿಗಳೊಂದಿಗೆ ಅಕ್ಟೋಬರ್ 15 ರೊಳಗಾಗಿ ದ್ವಿಪ್ರತಿಯಲ್ಲಿ ಪ್ರಸ್ತಾವನೆಯನ್ನು ಜಿಲ್ಲಾ ವಿಕಲಚೇತನರ ಹಾಗೂ ಹಿರಿಯ ನಾಗರಿಕರ ಸಬಲೀಕರಣ ಕಲ್ಯಾಣಾಧಿಕಾರಿಗಳ ಕಚೇರಿಗೆ ಸಲ್ಲಿಸಬಹುದಾಗಿದೆ.

ಹೆಚ್ಚಿನ ಮಾಹಿತಿಗಾಗಿ ಜಿಲ್ಲಾ ವಿಕಲಚೇತನರ ಹಾಗೂ ಹಿರಿಯ ನಾಗರಿಕರ ಸಬಲೀಕರಣ ಕಲ್ಯಾಣಾಧಿಕಾರಿಗಳ ಕಚೇರಿಯ ದೂರವಾಣಿ ಸಂಖ್ಯೆ: 08372-220419ಗೆ ಕಚೇರಿಯ ವೇಳೆಯಲ್ಲಿ ಸಂಪರ್ಕಿಸಬಹುದಾಗಿದೆ.

## ಅರ್ಜಿ ಆಹ್ವಾನ

■ವಿಜಯಸಾಕ್ಷಿ ಸುದ್ದಿ, ಗದಗ

2024-25ನೇ ಸಾಲಿಗೆ ಮೆಟ್ರಿಕ್ ಪೂರ್ವ ಮತ್ತು ಮೆಟ್ರಿಕ್ ನಂತರದ ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡದ ವಿದ್ಯಾರ್ಥಿ ವೇತನ ತಂತ್ರಾಂಶ ssp.karnataka,gov.in ವೆಬ್‌ಸೈಟ್‌ನಲ್ಲಿ ಮೆಟ್ರಿಕ್ ಪೂರ್ವ 1ನೇ ತರಗತಿಯಿಂದ 10ನೇ ತರಗತಿಯವರೆಗಿನ ವಿದ್ಯಾರ್ಥಿಗಳು ಆನ್‌ಲೈನ್‌ನಲ್ಲಿ ಅರ್ಜಿಯನ್ನು ಸಲ್ಲಿಸಬಹುದು. ಮೆಟ್ರಿಕ್ ನಂತರದ ವಿದ್ಯಾರ್ಥಿಗಳು ಸಹ ssp.karnataka.gov.in ವೆಬ್‌ಸೈಟ್‌ನಲ್ಲಿ ಅರ್ಜಿ ಸಲ್ಲಿಸಬಹುದಾಗಿದೆ. ಹೆಚ್ಚಿನ ಮಾಹಿತಿಗಾಗಿ ಆಯಾ ತಾಲೂಕು ಸಹಾಯಕ ನಿರ್ದೇಶಕರು ಸಮಾಜ ಕಲ್ಯಾಣ ಇಲಾಖೆಯ ಕಚೇರಿಯನ್ನು ಸಂಪರ್ಕಿಸಬಹುದಾಗಿದೆ.

ಹಿಂದೂ ಮಹಾಗಣಪತಿ ಉತ್ಸವ ಮಂಟಪದಲ್ಲಿ ಸಮಾಜಮುಖಿ ಕಾರ್ಯಕ್ರಮಗಳು

# ಶಾಂತಿ-ಸೌಹಾರ್ದತೆಗಾಗಿ ಗಣಹೋಮ ಇಂದು

■ವಿಜಯಸಾಕ್ಷಿ ಸುದ್ದಿ, ಗದಗ

ಶ್ರೀ ಸುದರ್ಶನ ಚಕ್ರ ಯುವಕ ಮಂಡಳದ ವತಿಯಿಂದ ಗದಗ ಕಾಟನ್ ಮಾರ್ಕೆಟ್ ರಸ್ತೆಯ ವೀರಶೈವ ಜನರಲ್ ಲೈಬ್ರರಿ ಬಳಿ ಹಿಂದೂ ಮಹಾಗಣಪತಿಯ ಉತ್ಸವದೊಂದಿಗೆ ಸಮಾಜಮುಖಿ ಕಾರ್ಯಕ್ರಮಗಳನ್ನು ರೂಪಿಸಲಾಗಿದೆ ಎಂದು ಉತ್ಸವ ಸಮಿತಿಯ ಗೌರವ ಅಧ್ಯಕ್ಷರಾದ ಎಸ್.ಎಚ್. ಶಿವನಗೌಡರ ಹೇಳಿದರು.

ಗ'ಜಾ'ನ'ನೋ'ತ್ಸ'ವ' ವೇದಿಕೆಯಲ್ಲಿ ಗಣೇಶ ಮೂರ್ತಿ ಕಲಾವಿದ ರೋಣದ ಸಾಗರ ಚಿತ್ರಗಾರ ಅವರನ್ನು ಉತ್ಸವ ಸಮಿತಿಯಿಂದ ಸನ್ಮಾನಿಸಿ ಮಾತನಾಡಿದ ಅವರು, ಕಲಾವಿದರು ಅತ್ಯಾಕರ್ಷಕವಾದ ಮೂರ್ತಿ ನಿರ್ಮಿಸಿದ್ದು ಭಕ್ತಾಧಿಗಳ ಮೆಚ್ಚುಗೆ-ಭಕ್ತಿಗೆ ಪಾತ್ರವಾಗಿದೆ ಎಂದರು.

21 ದಿನಗಳವರೆಗೆ ಹಿಂದೂ ಮಹಾಗಣಪತಿಯ ಉತ್ಸವ ಜರುಗಲಿದೆ. ಈ ನಿಮಿತ್ತ



ಜನಪರ ಕಾರ್ಯಗಳನ್ನು ಹಮ್ಮಿಕೊಳ್ಳಲಾಗಿದೆ. ಶಾಂತಿ-ಸೌಹಾರ್ದತೆಗಾಗಿ, ಸಕಲರಲ್ಲೂ ಸದ್ಭಾವನೆ ಮೂಡಿಸಲು ಸೆ. 12ರಂದು ಬೆಳಿಗ್ಗೆ 6 ಗಂಟೆಗೆ ಮಂಟಪದಲ್ಲಿ ಗಣಹೋಮ ಜರುಗುವದು.

ಉತ್ಸವ ಸಮಿತಿಯ ಅಧ್ಯಕ್ಷ ಸುಧೀರ ಕಾಟೀಗರ, ಯುವ ಮಂಡಳದ ಸಂಸ್ಥಾಪಕ ಅಧ್ಯಕ್ಷ, ಉತ್ಸವ ಸಮಿತಿಯ ಪ್ರಧಾನ ಕಾರ್ಯದರ್ಶಿ ರಾಘವೇಂದ್ರ ಹಬೀಬ ಸೇರಿದಂತೆ ಉತ್ಸವ ಸಮಿತಿಯ ಉಪಾಧ್ಯಕ್ಷರಾದ ರವಿರಾಜ ಮಾಳೇಕೊಪ್ಪಮಠ, ಗಂಗಾಧರ ಹಬೀಬ, ಅಶ್ವಿನಿ ಜಗತಾಪ, ಅಂಕಿತ ಸಾವಕಾರ, ಶಿವು ಹಿರೇಮನಿಪಾಟೀಲ, ಕುಮಾರ ಮಾರನಬಸರಿ, ಖಜಾಂಚಿ ಕೀರ್ತಿ ಕಾಂಬಳೇಕರ, ಪ್ರಶಾಂತ ಪಾಟೀಲ, ನಗರಸಭಾ ಸದಸ್ಯರಾದ ಹುಲಿಗೆಮ್ಮ ಹಬೀಬ, ಶ್ರೀಪತಿ ಉಡುಪಿ, ಮೋಹನ ಮಾಳಶೆಟ್ಟರ, ವಂದನಾ ವೆರ್ಣೇಕರ, ರಂಜನಾ ಕೋಟಿ, ಲತಾ ಮುತ್ತಿನಪೆಂಡಿಮಠ, ಮಂಜು ಖೋಡೆ, ಯಲ್ಲಪ್ಪ ಭಜಂತ್ರಿ, ರಮೇಶ ಸಜ್ಜಗಾರ, ರವಿ ಚವ್ಹಾಣ, ಗಜು ಹಬೀಬ, ಗಣೇಶ ಲದವಾ, ಸ್ವರೂಪ ಹುಬ್ಬಳ್ಳಿ, ಸುರೇಶ ಚವ್ಹಾಣ, ಪ್ರಶಾಂತ ಚವಡಿ, ನಾಗರಾಜ ಸೋಳಂಕಿ, ವಿಶ್ವನಾಥ ಶಿರಗಣ್ಣವರ, ರವಿ ನರೇಗಲ್ಲ, ಪ್ರಸಾದ ಸಿದ್ಲಿಂಗ್, ಅನಿಲ ಪವಾರ, ಗಿರೀಶ ಬೇವಿನಕಟ್ಟಿ, ಗಣೇಶ ಚವ್ಹಾಣ, ಮಾರುತಿ ಕಾಟವಾ, ಪ್ರವೀಣ ನಾಯ್ಕರ್, ಈರಣ್ಣ ಬಳ್ಳಾರಿ ಮುಂತಾದವರು ಉಪಸ್ಥಿತರಿದ್ದರು.

ಉತ್ಸವದ ಅಂಗವಾಗಿ ಉಚಿತ ಆರೋಗ್ಯ ತಪಾಸಣೆ, ನೇತ್ರ ತಪಾಸಣೆ, ಮಹಾ ಅನ್ನಸಂತರ್ಪಣೆ ಸೇರಿದಂತೆ ವೈವಿಧ್ಯಮಯ ಕಾರ್ಯಕ್ರಮಗಳನ್ನು ರೂಪಿಸಲಾಗಿದೆ. ಉತ್ಸವ ಸಮಿತಿಯ ಪದಾಧಿಕಾರಿಗಳು ಉತ್ಸಾಹದೊಂದಿಗೆ ಎಲ್ಲ ಕಾರ್ಯಗಳನ್ನು ಸುಗಮಗೊಳಿಸಿಸುತ್ತಿದ್ದಾರೆ. ಮಹಿಳಾ ಸಮಿತಿಯ ಪದಾಧಿಕಾರಿಗಳೂ ಸಹ ಉತ್ಸುಕತೆಯಿಂದ ಕಾರ್ಯ ಮಾಡುತ್ತಿದ್ದಾರೆ ಜೊತೆಗೆ ಭಕ್ತಾಧಿಗಳು, ಮಹಾದಾನಿಗಳು ಉದಾರತೆ ಮೆರೆದಿದ್ದಾರೆ ಎಂದು ಎಸ್.ಎಚ್. ಶಿವನಗೌಡರ ತಿಳಿಸಿದರು.

# ಕ್ರೀಡಾಕೂಟದಲ್ಲಿ ಸಾಧನೆ




■ವಿಜಯಸಾಕ್ಷಿ ಸುದ್ದಿ, ಗದಗ

ಇಲ್ಲಿನ ಬಸವೇಶ್ವರ ಪದವಿಪೂರ್ವ ಮಹಾವಿದ್ಯಾಲಯದ ಕ್ರೀಡಾಂಗಣದಲ್ಲಿ ಬುಧವಾರ ನಡೆದ 2024-25ನೇ ಸಾಲಿನ ಗದಗ ಶಹರ ವಲಯದ ತಾಲೂಕು ಮಟ್ಟದ ಕ್ರೀಡಾಕೂಟದಲ್ಲಿ ಬಾಲಕಿಯರ ವಿಭಾಗದ ಕಬ್ಬಡ್ಡಿ ಕ್ರೀಡೆಯಲ್ಲಿ ಮತ್ತು ಬಾಲಕಿಯರ ಪ್ರೌಢಶಾಲಾ ವಿಭಾಗದ ವಾಲಿಬಾಲ್ ಪಂದ್ಯಾವಳಿಯಲ್ಲಿ ಮಲ್ಲಸಮುದ್ರದ ಅಲ್ಪಸಂಖ್ಯಾತರ ಮೊರಾರ್ಜಿ ದೇಸಾಯಿ ಬಾಲಕಿಯರ ವಸತಿ ಶಾಲೆ ವಿದ್ಯಾರ್ಥಿನಿಯರು ಪ್ರಥಮ ಸ್ಥಾನ ಪಡೆದು ಜಿಲ್ಲಾ ಮಟ್ಟದ ಕ್ರೀಡಾ ಕೂಟಕ್ಕೆ ಆಯ್ಕೆಯಾಗಿದ್ದಾರೆ.

ಇಲಾಖೆಯ ಜಿಲ್ಲಾ ಅಧಿಕಾರಿಗಳಾದ ಅಮಿತ ಬಿದರಿ, ಪ್ರಾಚಾರ್ಯರಾದ ಮಂಜುಳಾ ಎಸ್.ಆರಿಕಟ್ಟಿ ಹಾಗೂ ಸಿಬ್ಬಂದಿ ವರ್ಗದವರು ಸಾಧನೆಗೈದ ವಿದ್ಯಾರ್ಥಿಗಳಿಗೆ ಹಾಗೂ ದೈಹಿಕ ಶಿಕ್ಷಣ ಶಿಕ್ಷಕಿ ಗಿರಿಜಾ ರಾಮಣ್ಣನವರ ಇವರಿಗೆ ಅಭಿನಂದನೆ ಸಲ್ಲಿಸಿದ್ದಾರೆ.

# ಜನಪದ ಜನಸಮೂಹದ ಅಭಿವ್ಯಕ್ತಿ ಸಾಹಿತ್ಯ



■ವಿಜಯಸಾಕ್ಷಿ ಸುದ್ದಿ, ಗದಗ

ಜನ ಸಮೂಹದಿಂದ ಒಬ್ಬರಿಂದ ಒಬ್ಬರಿಗೆ ಜನ-ಪದ ಹರಡಿಕೊಂಡು ಜನಪದವಾಗಿ ಹೊರಹೊಮ್ಮಿದ್ದು, ಕಾಲಕ್ರಮೇಣ ಕವಿ-ಸಾಹಿತಿಗಳು ಜನಪದ ಸಾಹಿತ್ಯವನ್ನು ಶ್ರೀಮಂತಗೊಳಿಸಿದ್ದಾರೆ ಎಂದು ಗದುಗಿನ ಕರ್ನಾಟಕ ಕೀರ್ತನ ಕಲಾ ವೇದಿಕೆಯ ಅಧ್ಯಕ್ಷ ಸಿದ್ದೇಶ್ವರ ಶಾಸ್ತ್ರೀ ತೆಲ್ಲೂರ ಹೇಳಿದರು.

ಅವರು ಹುನಗುಂದ ತಾಲೂಕಿನ ಇದ್ದಲಗಿ ಗ್ರಾಮದ ಶರಣ ಬಸವೇಶ್ವರ ಕಲ್ಯಾಣ ಮಂಟಪದಲ್ಲಿ ಕರ್ನಾಟಕ ಕೀರ್ತನ ಕಲಾ ವೇದಿಕೆ ಗದಗ, ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಬೆಂಗಳೂರು ಆಶ್ರಯದಲ್ಲಿ ನಡೆದ ಸುಗಮ ಸಂಗೀತ ಹಾಗೂ ಜಾನಪದೋತ್ಸವ ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿ ಮಾತನಾಡಿದರು. ಜನಪದ ಸಾಹಿತ್ಯ, ಸೊಗಡು ಗ್ರಾಮೀಣ ಪ್ರದೇಶದಲ್ಲಿ ಇನ್ನೂ ಜೀವಂತಾಗಿದ್ದು, ಜನಪದ ಕಲಾವಿದರ ತಲೆಮಾರು ಇನ್ನೊಂದು ತಲೆಮಾರಿಗೂ ಈ ಸಾಹಿತ್ಯವನ್ನು ವರ್ಗಾಯಿಸುತ್ತ ದಾಖಲೀಕರಣ ಮಾಡಿರುವದು ಅಭಿನಂದನೀಯ ಎಂದರು.

ಸಮಾರಂಭದ ಸಾನ್ನಿಧ್ಯ ವಹಿಸಿದ್ದ ಹಡಗಲಿಯ ಪೂಜ್ಯ ರುದ್ರಮುನಿ ಸ್ವಾಮೀಜಿ ಹಾಗೂ ಬಿಸನಾಳದ ಗ್ಯಾನಪ್ಪಯ್ಯ ಶರಣರು ಜನಪದ ಸಾಹಿತ್ಯ ಪರಂಪರೆ ಹೀಗೆ ಮುನ್ನಡೆಯಬೇಕು. ಹೊಸ ತಲೆಮಾರಿನ ಯುವ ಜನಾಂಗ ಈ ಜನಪದ ಸಾಹಿತ್ಯವನ್ನು ಮುಂದಿನ ಪೀಳಿಗೆಗೆ ಮುನ್ನಡೆಸಬೇಕೆಂದರು.

ಶರಣಕುಮಾರ ಹೂಗಾರ ಹಾಗೂ ಚನ್ನಬಸವ ಹೂಗಾರ ಅವರಿಂದ ಜನಪದ ಸಂಗೀತ ಜರುಗಿತು. ಆನಂದಯ್ಯ ಹಿರೇಮಠ ನಿರೂಪಿಸಿದರು. ರಾಜಶೇಖರ ಇದ್ದಲಗಿ ವಂದಿಸಿದರು. ಸಮಾರಂಭದಲ್ಲಿ ಗ್ರಾಮದ ಹಿರಿಯರು ಪಾಲ್ಗೊಂಡಿದ್ದರು.



ಕರ್ನಾಟಕ ರಾಜ್ಯ ವೀರಶೈವ ಲಿಂಗಾಯತ ಪಂಚಮಸಾಲಿ ಸಂಘದ ರಾಜ್ಯಾಧ್ಯಕ್ಷ ಸೋಮನಗೌಡ ಮಾಲಿಪಾಟೀಲ್ ಲಕ್ಷ್ಮೇಶ್ವರ ನಗರಕ್ಕೆ ಭೇಟಿ ನೀಡಿದ ಸಂದರ್ಭದಲ್ಲಿ ರಾಜ್ಯಾಧ್ಯಕ್ಷ ಸೋಮನಗೌಡ ಮಾಲಿಪಾಟೀಲ್, ಪ್ರಧಾನ ಕಾರ್ಯದರ್ಶಿ ಸಂಗಮೇಶ ಪಟ್ಟಣಶೆಟ್ಟಿ, ಜಿಲ್ಲಾಧ್ಯಕ್ಷ ಈರಣ್ಣ ಕರಬಿಷ್ಠಿ ಹಾಗೂ ಗೌರವ ಅಧ್ಯಕ್ಷ, ನಿವೃತ್ತ ಸೈನಿಕ ಶಿವಾನಂದ ಪಲ್ಲೇದ ಅವರನ್ನು ಲಕ್ಷ್ಮೇಶ್ವರ ತಾಲೂಕು ವೀರಶೈವ ಲಿಂಗಾಯತ ಪಂಚಮಸಾಲಿ ಸಂಘದ ವತಿಯಿಂದ ಸನ್ಮಾನಿಸಿ, ಗೌರವಿಸಿದರು.

# ಮುಸ್ಲಿಮರ ಮೀಸಲಾತಿ ಹೆಚ್ಚಿಸಲು ಒತ್ತಾಯ

■ವಿಜಯಸಾಕ್ಷಿ ಸುದ್ದಿ, ಕೊಪ್ಪಳ

ಮುಸ್ಲಿಮರ ಜನಸಂಖ್ಯೆ ಆಧರಿಸಿ ಶೇ. 4ರಷ್ಟಿರುವ ಮೀಸಲಾತಿಯನ್ನು ಶೇ.8ರಷ್ಟು ಹೆಚ್ಚಿಸಬೇಕೆಂದು ಸರಕಾರಕ್ಕೆ ಒತ್ತಾಯಿಸಲು ಶೀಘ್ರ ಬೆಂಗಳೂರಿಗೆ ಜಾಥಾ ಹೊರಡಲಿದೆ ಎಂದು ಕರ್ನಾಟಕ ಮುಸ್ಲಿಂ ಯುನಿಟಿ ರಾಜ್ಯಾಧ್ಯಕ್ಷ ಅಬ್ದುಲ್ ಜಬ್ಬಾರ್ ಕಲಬುರ್ಗಿ ಹೇಳಿದರು.

ನಗರದ ಕೆಯುಡಬ್ಲ್ಯೂಜೆಯ ಪತ್ರಿಕಾ ಭವನದಲ್ಲಿ ಬುಧವಾರ ಏರ್ಪಡಿಸಿದ್ದ ಸುದ್ದಿಗೋಷ್ಠಿಯಲ್ಲಿ ಮಾತನಾಡಿ, ಮುಸ್ಲಿಮರನ್ನು ಮುಖ್ಯವಾಹಿನಿಗೆ ತರಲು ಅವರಿಗೆ ಸಾಮಾಜಿಕ ನ್ಯಾಯ ದೊರಕಿಸಿಕೊಡಲು ರಾಜ್ಯದಲ್ಲಿ ಕರ್ನಾಟಕ ಮುಸ್ಲಿಂ ಯುನಿಟಿ ಎಂಬ ಒಂದು ಸಂಘ ಅಸ್ತಿತ್ವಕ್ಕೆ ಬಂದಿದೆ. ಹಿಂದುಳಿದ ಮುಸ್ಲಿಂ




ಸಮಾಜಕ್ಕೆ ಸಾಮಾಜಿಕ ನ್ಯಾಯ ದೊರಕಿಸಿ ಕೊಡುವ ಉದ್ದೇಶದಿಂದ ನಿರಂತರ ಹೋರಾಟ ಹಮ್ಮಿಕೊಂಡು ಸರಕಾರದ ಗಮನ ಸೆಳೆಯುವಂತಹ ಕೆಲಸ ನಮ್ಮ ಸಂಘ ಮಾಡುತ್ತಿದೆ ಎಂದು ಹೇಳಿದರು.

ನಮ್ಮ ಈ ಕರ್ನಾಟಕ ಮುಸ್ಲಿಂ ಯೂನಿಟಿ ಸಂಘ ಯಾವುದೇ ಪಕ್ಷಕ್ಕೆ ಸಂಬಂಧಿಸಿದ ಸಂಘಟನೆ ಅಲ್ಲ ಕೇವಲ ಸಮಾಜದ ಅಭಿವೃದ್ಧಿ ಹಿತದೃಷ್ಟಿಯಿಂದ ಕೆಲಸ ಮಾಡುತ್ತಿದೆ. ಸಮಾಜದ ಹಿರಿಯರ ಮತ್ತು ಜನಪ್ರತಿನಿಧಿಗಳ ಸಹಾಯ ಸಹಕಾರ ಪಡೆದು ಸರ್ಕಾರ ಕೆ ಮನವರಿಕೆ ಮಾಡಿ ಸಮಾಜದ ಬೇಕು ಬೇಡಿಕೆಗಳ ಈಡೇರಿಕೆಗಾಗಿ ಪ್ರಾಮಾಣಿಕ ಪ್ರಯತ್ನ ಮಾಡುವ ಸದುದ್ದೇಶದಿಂದ ಈ ಸಂಘ ಕಾರ್ಯ ನಿರ್ವಹಿಸುತ್ತಿದೆ ಎಂದು ಕರ್ನಾಟಕ ಮುಸ್ಲಿಂ ಯುನಿಟಿ ರಾಜ್ಯಾಧ್ಯಕ್ಷ ಅಬ್ದುಲ್ ಜಬ್ಬಾರ್ ಕಲಬುರ್ಗಿ ಹೇಳಿದರು.

ಈ ಸಂದರ್ಭದಲ್ಲಿ ರಾಜ್ಯ ಸಮಿತಿ ಕಾರ್ಯಕಾರಣಿ ಸದಸ್ಯರಾದ ಕೆ ಎಂ ಸಯ್ಯದ್, ರಾಜ್ಯ ಸಂಚಾಲಕ ಮೆಹಬೂಬ್ ಸಾಬ್ ಸರಖವಾಸ್, ನೂರ್ ಅಹಮದ್, ಆಸಿಫ ಡಾಲಾಯತ್, ಜಿಲ್ಲಾಧ್ಯಕ್ಷ ಮೊಮ್ಮದ್ ಜಿಲಾನ್ ಕಿಲ್ಲೆದಾರ್ ಹಾಗೂ ಅಂಜುಮನ್ ಕಮಿಟಿ ಅಧ್ಯಕ್ಷ ಎಂಡಿ ಆಸಿಫ್ ಕರ್ಕಿಹಳ್ಳಿ ಅನೇಕರು ಪಾಲ್ಗೊಂಡಿದ್ದರು.

## ನಿಧನ ವಾರ್ತೆ



### ಚರಮೂರ್ತಯ್ಯ ಹಿರೇಮಠ

ಡಂಬಳ: ಸಮೀಪದ ಕದಾಂಪುರ ಗ್ರಾಮದ ವೀರಶೈವ ಲಿಂಗಾಯತ ಸಮಾಜದ ಹಿರಿಯರು, ನಿವೃತ್ತ ಗ್ರಾ.ಪಂ.ಕಾರ್ಯದರ್ಶಿ, ಖ್ಯಾತ ಪುರಾಣ ಪ್ರವಚನಕಾರರಾಗಿದ್ದ ಚರಮೂರ್ತಯ್ಯ ಬಸಯ್ಯ ಹಿರೇಮಠ (84) ಬುಧವಾರ ಸಂಜೆ 7:30ಕ್ಕೆ ನಿಧನರಾದರು.

ಮೃತರು ಇಬ್ಬರು ಪುತ್ರರು, ಮೂವರು ಪುತ್ರಿಯರು, ಸೊಸೆಯಂದಿರರು, ಮೊಮ್ಮಕ್ಕಳು ಸೇರಿದಂತೆ ಅಪಾರ ಬಂಧು ಬಳಗ ಅಗಲಿದ್ದಾರೆ. ಗುರುವಾರ ಮಧ್ಯಾಹ್ನ 3 ಗಂಟೆಗೆ ಸ್ವಗ್ರಾಮದಲ್ಲಿ ಅಂತ್ಯಕ್ರಿಯೆ ಜರುಗಲಿದೆ.

### ಬಸವ್ವ ಬಸಯ್ಯ ಬೃಹನ್ಮಠ



ಕೊಪ್ಪಳ: ಯಲಬುರ್ಗಾ ತಾಲೂಕಿನ ಮಾಳೆಕೊಪ್ಪ ಗ್ರಾಮದ ವೀರಶೈವ ಜಂಗಮ ಸಮಾಜದ ಹಿರಿಯರಾದ ಬಸವ್ವ ಬಸಯ್ಯ ಬೃಹನ್ಮಠ (79) ಮಂಗಳವಾರ ನಿಧನರಾದರು. ಆರಂಭದಿಂದಲೂ ಆಧ್ಯಾತ್ಮ ಚಿಂತನೆಯಲ್ಲಿ ಆಸಕ್ತಿ ಹೊಂದಿದ್ದ ಇವರು, ಓರ್ವ ಪುತ್ರ, ಇಬ್ಬರು ಪುತ್ರಿಯರು, ಮೊಮ್ಮಕ್ಕಳು ಸೇರಿದಂತೆ ಅಪಾರ-ಬಂಧಗಳನ್ನು ಅಗಲಿದ್ದಾರೆ.

ಜಿಲ್ಲಾ ಮಟ್ಟದ ಅಧಿಕಾರಿಗಳ ಸಭೆಯಲ್ಲಿ ಎಡಿಸಿ ಸಿದ್ರಾಮೇಶ್ವರ

# ಪ್ರಜಾಪ್ರಭುತ್ವ ದಿನಾಚರಣೆ ಯಶಸ್ಸಿಗೆ ಶ್ರಮಿಸಿ

■ವಿಜಯಸಾಕ್ಷಿ ಸುದ್ದಿ, ಕೊಪ್ಪಳ

ಜಿಲ್ಲೆಯಲ್ಲಿ ಅಂತಾರಾಷ್ಟ್ರೀಯ ಪ್ರಜಾಪ್ರಭುತ್ವ ದಿನಾಚರಣೆ ಸಂಬಂಧ ಹಮ್ಮಿಕೊಳ್ಳುತ್ತಿರುವ ಮಾನವ ಸರಪಳಿ ಕಾರ್ಯಕ್ರಮದ ಯಶಸ್ಸಿಗೆ ಶ್ರಮಿಸುವಂತೆ ಎಡಿಸಿ ಸಿದ್ರಾಮೇಶ್ವರ ಸಂಬಂಧಿಸಿದ ಅಧಿಕಾರಿಗಳಿಗೆ ಸೂಚನೆ ನೀಡಿದರು.

ಜಿಲ್ಲಾಡಳಿತ ಭವನದ ಕಚೇರಿ ಸಭಾಂಗಣದಲ್ಲಿ ಜಿಲ್ಲಾ ಮಟ್ಟದ ಅಧಿಕಾರಿಗಳು, ತಾಲೂಕು ಪಂಚಾಯತ್ ಕಾರ್ಯನಿರ್ವಾಹಕ ಅಧಿಕಾರಿಗಳು, ಗ್ರಾಮ ಪಂಚಾಯತಿಯ ಅಭಿವೃದ್ಧಿ ಅಧಿಕಾರಿಗಳೊಂದಿಗೆ ಹಮ್ಮಿಕೊಂಡ ಸಭೆ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು.

ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ಸಮಾಜ ಕಲ್ಯಾಣ ಇಲಾಖೆ ಹಾಗೂ ವಿವಿಧ ಇಲಾಖೆಗಳ ಸಹಯೋಗದಲ್ಲಿ ಸೆ.15ರಂದು ಅಂತಾರಾಷ್ಟ್ರೀಯ ಪ್ರಜಾಪ್ರಭುತ್ವ ದಿನಾಚರಣೆ



ಪ್ರಯುಕ್ತ ಕೊಪ್ಪಳ ಜಿಲ್ಲೆಯಲ್ಲಿ ಮಾನವ ಸರಪಳಿ ಕಾರ್ಯಕ್ರಮವನ್ನು ಹಮ್ಮಿಕೊಂಡಿದೆ. ಈ ಮಾನವ ಸರಪಳಿ ಕಾರ್ಯಕ್ರಮ ಹಾದುಹೋಗುವ ಗ್ರಾಮ ಪಂಚಾಯತಿ, ನಗರ ಪ್ರದೇಶದ ಎಲ್ಲ ಪ್ರಾಥಮಿಕ ಶಾಲೆಗಳ 6ರಿಂದ 10ನೇ ತರಗತಿ, ಪಿಯುಸಿ, ಪದವಿ ವಿದ್ಯಾರ್ಥಿಗಳು, ಗ್ರಾಮ ಪಂಚಾಯತಿ ಮತ್ತು ನಗರಸಭೆ, ಪಟ್ಟಣ ಪಂಚಾಯತಿ ಚುನಾಯಿತ ಪ್ರತಿನಿಧಿಗಳು, ಗ್ರಾಮ ಪಂಚಾಯತಿಯ ಮಹಿಳಾ ಒಕ್ಕೂಟದ ಸದಸ್ಯರು, ನಗರ ಪ್ರದೇಶದ ವಿವಿಧ ಮಹಿಳಾ ಒಕ್ಕೂಟದ ಸದಸ್ಯರು, ನರೇಗಾ ಕೂಲಿಕಾರರು ಮತ್ತು ಸರ್ಕಾರದ ಗೃಹಲಕ್ಷ್ಮೀ ಯೋಜನೆಯ ಫಲಾನುಭವಿಗಳು, ಹಾಸ್ಟೆಲ್‌ನಲ್ಲಿರುವ ವಿದ್ಯಾರ್ಥಿಗಳು, ಜಿಲ್ಲೆಯ ಎಲ್ಲ ಸರ್ಕಾರಿ ಇಲಾಖೆಗಳ ಅಧಿಕಾರಿಗಳು, ಸರ್ವ ಸಿಬ್ಬಂದಿ ಸಾರ್ವಜನಿಕರು, ಕೈಗಾರಿಕೆಗಳಲ್ಲಿ ಕೆಲಸ ಮಾಡುತ್ತಿರುವ ಕಾರ್ಮಿಕರು ಮಾನವ ಸರಪಳಿ ಕಾರ್ಯಕ್ರಮದಲ್ಲಿ ಭಾಗವಹಿಸಲು ಕ್ರಮ ಕೈಗೊಳ್ಳಬೇಕು ಎಂದು ಸೂಚನೆ ನೀಡಿದರು.

ಭದ್ರತೆಯ ದೃಷ್ಟಿಯಿಂದ ಮಾನವ ಸರಪಳಿ ಕಾರ್ಯಕ್ರಮ ಜರುಗುವ ಸ್ಥಳಗಳಲ್ಲಿ ಸೂಕ್ತ ಪೊಲೀಸ್ ಬಂದೋಬಸ್ತ ಒದಗಿಸಲು ಪೊಲೀಸ್ ಇಲಾಖೆಯವರು ಕ್ರಮ ವಹಿಸಬೇಕು. ಕೊಪ್ಪಳ ಜಿಲ್ಲೆಯಲ್ಲಿ ಮಾನವ ಸರಪಳಿ ಕಾರ್ಯಕ್ರಮಕ್ಕೆ ಎಲ್ಲರೂ ಕೈಜೋಡಿಸಿ ಕಾರ್ಯಕ್ರಮವನ್ನು ಯಶಸ್ವಿಗೊಳಿಸಬೇಕು ಎಂದರು.

ಸಭೆಯಲ್ಲಿ ಜಿಲ್ಲಾ ನಗರಾಭಿವೃದ್ಧಿ ಕೋಶದ ಯೋಜನಾ ನಿರ್ದೇಶಕರಾದ ರೇಷ್ಮಾ ಹಾನಗಲ್, ಜಂಟಿ ಕೃಷಿ ನಿರ್ದೇಶಕ ಟಿ.ಎಸ್. ರುದ್ರೇಶಪ್ಪ ಸಮಾಜ ಕಲ್ಯಾಣ ಇಲಾಖೆ ಉಪನಿರ್ದೇಶಕ ರಾಜು ತಳವಾರ, ಶಾಲಾ ಶಿಕ್ಷಣ ಇಲಾಖೆ ಉಪನಿರ್ದೇಶಕ ಶ್ರೀಶೈಲ ಬಿರಾದಾರ, ಪದವಿಪೂರ್ವ ಶಿಕ್ಷಣ ಇಲಾಖೆ ಉಪನಿರ್ದೇಶಕ ಜಗದೀಶ್ ಜಿ.ಹೆಚ್. ಸೇರಿದಂತೆ ವಿವಿಧ ಇಲಾಖೆಗಳ ಅಧಿಕಾರಿಗಳು, ತಾ.ಪಂ ಇ.ಓ.ಗಳು ಉಪಸ್ಥಿತರಿದ್ದರು.

ಸೆ.15ರ ಬೆಳಿಗ್ಗೆ 9 ಗಂಟೆಗೆ ಕೊಪ್ಪಳ ನಗರದ ಅಶೋಕ ವೃತ್ತದಲ್ಲಿ ಸಂವಿಧಾನ ಪೀಠಿಕೆ ಓದು ಕಾರ್ಯಕ್ರಮವನ್ನು ಆಯೋಜಿಸಲು ತೀರ್ಮಾನಿಸಲಾಗಿದ್ದು, ಈ ಕಾರ್ಯಕ್ರಮಕ್ಕೆ ಜಿಲ್ಲಾ ಉಸ್ತುವಾರಿ ಸಚಿವರು, ವಿಧಾನಸಭೆ ಹಾಗೂ ವಿಧಾನ ಪರಿಷತ್ ಶಾಸಕರು, ಸಂಸದರು, ಜಿಲ್ಲಾಧಿಕಾರಿಗಳು ಹಾಗೂ ಜಿ.ಪಂ ಸಿಇಒ ಪಾಲ್ಗೊಳ್ಳಲಿದ್ದಾರೆ.

ಕುರ್ತಕೋಟಿಯಲ್ಲಿ ರೂರ್ಬನ್ ಯೋಜನೆಯ ವಿವಿಧ ಕಾಮಗಾರಿ ಉದ್ಘಾಟಿಸಿದ ಸಚಿವ ಎಚ್.ಕೆ. ಪಾಟೀಲ

# ರೂರ್ಬನ್ ಯೋಜನೆಯೊಂದಿಗೆ ಗ್ರಾಮಗಳ ಅಭಿವೃದ್ಧಿಯಾಗಲಿ

■ ವಿಜಯಸಾಕ್ಷಿ ಸುದ್ದಿ, ಗದಗ

ಜಾನುವಾರು ವಸತಿ ನಿಲಯ, ತರಕಾರಿ ಮಾರುಕಟ್ಟೆ ಮತ್ತು ಆರ್ಟಿಸನ್ ಕೇಂದ್ರಗಳ ಸದುಪಯೋಗವನ್ನು ಪಡೆದುಕೊಂಡು ಗ್ರಾಮಸ್ಥರು ಗ್ರಾಮಗಳನ್ನು ಅಭಿವೃದ್ಧಿಪಡಿಸಿ ಎಂದು ಜಿಲ್ಲಾ ಉಸ್ತುವಾರಿ ಸಚಿವ ಎಚ್.ಕೆ. ಪಾಟೀಲ ಹೇಳಿದರು.

ಜಿಲ್ಲಾ ಪಂಚಾಯತ ವತಿಯಿಂದ ರೂರ್ಬನ್ ಯೋಜನೆಯಡಿ ಕುರ್ತಕೋಟಿ ಗ್ರಾಮ ಪಂಚಾಯಿತಿಯಲ್ಲಿ ನಿರ್ಮಿಸಲಾದ ಜಾನುವಾರು ವಸತಿ ನಿಲಯ, ತರಕಾರಿ ಮಾರುಕಟ್ಟೆ ಮತ್ತು ಆರ್ಟಿಸನ್ ಕೇಂದ್ರಗಳನ್ನು ಬುಧವಾರ ಉದ್ಘಾಟಿಸಿ ಅವರು ಮಾತನಾಡಿದರು.



ಗ್ರಾಮೀಣ ಹಾಗೂ ನಗರ ಜೀವನಕ್ಕೆ ಇರುವ ವ್ಯತ್ಯಾಸ, ಸೌಲಭ್ಯ ಸರಿದೂಗಿಸುವ ಮಹತ್ತರ ಯೋಜನೆ ಶ್ಯಾಮಪ್ರಸಾದ್ ಮುಖರ್ಜಿ ರೂರ್ಬನ್ ಯೋಜನೆಯಾಗಿದೆ. ಇದನ್ನು ಕುರ್ತಕೋಟಿ ಗ್ರಾಮಸ್ಥರು ಆಸಕ್ತಿ ಮೇರೆಗೆ ಪರಿಣಾಮಕಾರಿಯಾಗಿ ಕಾಮಗಾರಿ ಕೈಗೊಂಡು ಇಂದು ಲೋಕಾರ್ಪಣೆ ಮಾಡಿದ್ದು ಸಂತಸ ತಂದಿದೆ ಎಂದರು.

ನಮ್ಮ ಗ್ರಾಮಗಳನ್ನು ಇಚ್ಛಾಶಕ್ತಿಯಿಂದ ಅಭಿವೃದ್ಧಿಪಡಿಸಿದರೆ ದೇಶದ ಅಭಿವೃದ್ಧಿ ಮಾಡಿದಂತೆ. ದೇಶದಲ್ಲಿ ಅಭಿವೃದ್ಧಿ ಕೈಗೊಳ್ಳಲು ಅನುದಾನದ ಕೊರತೆ ಇಲ್ಲ. ಸರಿಯಾದ ಯೋಜನೆ ರೂಪಿಸಿ, ಸುಸಮಯದಲ್ಲಿ ಕಾಮಗಾರಿ ಅನುಷ್ಠಾನ ಮಾಡುವ ಬದ್ಧತೆ ನಮ್ಮಲ್ಲಿರಬೇಕು. ರೂರ್ಬನ್ ಯೋಜನೆಯನ್ನು ಹುಲಕೋಟಿ, ಕುರ್ತಕೋಟಿ, ಬಿಂಕದಕಟ್ಟಿ ಭಾಗದಲ್ಲಿ ಸಮರ್ಪಕ ಅನುಷ್ಠಾನ ಮಾಡುವ ಮೂಲಕ ದೇಶದಲ್ಲಿಯೇ ಉತ್ತಮ ಕ್ಲಸ್ಟರ್ ಆಗಿದೆ ಎಂದು ನುಡಿದರು.



ಜಾನುವಾರು ವಸತಿ ನಿಲಯದಿಂದ ನಮ್ಮ ರೈತರ ಹಸುಗಳು ಸುರಕ್ಷಿತವಾಗಿ ನೈಸರ್ಗಿಕ ವಿಕೋಪಗಳಿಂದ ದೂರವಾದಂತಾಗಿದೆ. ರೈತರ ಪರವಾಗಿ ಈ ಜಾನುವಾರು ವಸತಿ ನಿಲಯವು ಕಾರ್ಯನಿರ್ವಹಿಸುಂತಾಗಲಿ. ಈ ಮೂಲಕ ಜಾನುವಾರು ಸಾಕಾಣಿಕೆ ಮಹತ್ವ ಎಲ್ಲರಲ್ಲೂ ಮೂಡಲಿ ಎಂದು ಹೇಳಿದರು.

ಗ್ರಾ.ಪಂ ಸದಸ್ಯ ಅಪ್ಪಣ್ಣ ಇನಾಮತಿ ಮಾತನಾಡಿ, ಗ್ರಾಮದಲ್ಲಿ ರೂರ್ಬನ್ ಯೋಜನೆಯನ್ನು ಸಮರ್ಪಕವಾಗಿ ಬಳಕೆ ಮಾಡಿಕೊಳ್ಳಲಾಗಿದೆ. ಗ್ರಾಮಗಳ ಅವಶ್ಯಕತೆ ಪೂರೈಸುವಲ್ಲಿ ರೂರ್ಬನ್ ಇಂತಹ ಅನೇಕ ಕಾಮಗಾರಿಗಳಿಂದ ರೈತರಿಗೆ ಬಲ ತುಂಬುವ ಕಾರ್ಯವಾಗುತ್ತಿರುವುದು ಸಂತಸ ತಂದಿದೆ. ಶೈಕ್ಷಣಿಕ, ಸಾಮಾಜಿಕ, ಆರ್ಥಿಕ ಪ್ರಗತಿಗೆ ಅಭಿವೃದ್ಧಿ ಕಾಮಗಾರಿಗಳು ಪೂರಕವಾಗಿವೆ ಎಂದರು.

ಜಿ.ಪಂ ಸಿಇಓ ಭರತ ಎಸ್ ಅತಿಥಿಗಳನ್ನು ಸ್ವಾಗತಿಸಿ, ಪ್ರಾಸ್ತಾವಿಕ ಮಾತನಾಡಿದರು. ಕಾರ್ಯಕ್ರಮದಲ್ಲಿ ಗ್ರಾಪಂ ಅಧ್ಯಕ್ಷ ಮೈಲಾರಪ್ಪ ಇನಾಮತಿ, ಉಪಾಧ್ಯಕ್ಷ ಸರೋಜಾ ಅಂಗಡಿ, ಗಿರೀಶ್ ಡಬಾಲಿ, ವಿರೂಪಾಕ್ಷಪ್ಪ ಹೊಸಮನಿ, ಡಾ. ಎಲ್.ಜಿ. ಹಿರೇಗೌಡ, ಬಿ.ಬಿ. ಅಸೂಟಿ, ಬಿ.ವಿ. ಪಾಟೀಲ, ರವಿ ಮೂಲಿಮನಿ, ಅಕಬರಸಾಬ ಬಬರ್ಜಿ, ಸಿದ್ದು ಪಾಟೀಲ, ಅಶೋಕ ಮಂದಾಲಿ ಇದ್ದರು.

### ತರಕಾರಿ ಮಾರುಕಟ್ಟೆ

785 ಚದರ ಮೀಟರ್ ವಿಸ್ತೀರ್ಣದಲ್ಲಿ 60 ಲಕ್ಷ ವೆಚ್ಚದಲ್ಲಿ ನಿರ್ಮಾಣವಾಗಿದ್ದು, ಗ್ರಾಮ ವ್ಯಾಪ್ತಿಯಷ್ಟೇ ಅಲ್ಲದೆ ನೆರೆಹೊರೆಯ ಗ್ರಾಮಗಳ ಜನರಿಗೆ ಅನುಕೂಲವಾಗಲಿದೆ. ಸುಮಾರು 100 ಜನ ವ್ಯಾಪಾರಸ್ಥರಿಗೆ ಸ್ಥಳೀಯವಾಗಿ ಉದ್ಯೋಗ ದೊರೆತಂತಾಗಿದೆ.

### ಜಾನುವಾರು ವಸತಿ ನಿಲಯ

* 864 ಚದರ ಮೀಟರ್ ವಿಸ್ತೀರ್ಣದಲ್ಲಿ, 1 ಕೋಟಿ ರೂ ವೆಚ್ಚದಲ್ಲಿ ನಿರ್ಮಾಣ.
* 100 ಜಾನುವಾರುಗಳನ್ನು ನಿರ್ವಹಣೆ ಮಾಡುವ ಸಾಮರ್ಥ್ಯವನ್ನು ಹೊಂದಿದೆ.
* ರೋಗಗ್ರಸ್ಥ ಹಸುಗಳಿಗೆ ಮತ್ತು ಚಿಕಿತ್ಸೆಗಾಗಿ ಪ್ರತ್ಯೇಕ ಕೋಠಡಿ ವ್ಯವಸ್ಥೆ.
* ಹಾಲು ಸಂಗ್ರಹಣಾ ಕೊಠಡಿ ವ್ಯವಸ್ಥೆ.
* ಮೇವು ಸಂಗ್ರಹಣೆಗೂ ಪ್ರತ್ಯೇಕ ಕೋಠಡಿ ವ್ಯವಸ್ಥೆಯಿದೆ.

### ಆರ್ಟಿಸನ್ ಕೇಂದ್ರ

* 565 ಚ.ಮೀ ವಿಸ್ತೀರ್ಣದಲ್ಲಿ ಒಟ್ಟು 1 ಕೋಟಿ ರೂ ವೆಚ್ಚದಲ್ಲಿ ನಿರ್ಮಾಣವಾಗಿದೆ.
* ಕರಕುಶಲ ಕಾರ್ಮಿಕರಿಗೆ ಅವಶ್ಯವಿರುವ ಕುಲುಮೆ ವ್ಯವಸ್ಥೆ ಹೊಂದಿದೆ.
* ಸಿ.ಎನ್.ಸಿ ಕಾರ್ಯಕ್ಕೆ ಯಂತ್ರಗಳ ಅಳವಡಿಕೆ ಮಾಡಲಾಗಿದೆ.
* ಸುಮಾರು 200ರಿಂದ 300 ಜನ ಗ್ರಾಮೀಣ ಕರಕುಶಲ ಕಾರ್ಮಿಕರಿಗೆ ಈ ಕೇಂದ್ರವು ಅನುಕೂಲವಾಗಲಿದೆ.

## ಬಸ್‌ನಿಲ್ದಾಣದ ಅವ್ಯವಸ್ಥೆಗೆ ಖಂಡನೆ



■ ವಿಜಯಸಾಕ್ಷಿ ಸುದ್ದಿ, ಶಿರಹಟ್ಟಿ

ತಾಲೂಕಿನ ಬೆಳ್ಳಟ್ಟಿ ಬಸ್ ನಿಲ್ದಾಣದಲ್ಲಿಯ ಅವ್ಯವಸ್ಥೆಯನ್ನು ಖಂಡಿಸಿ ಮಂಗಳವಾರ ಕರವೇ ಸ್ವಾಭಿಮಾನಿ ಬಳಗದ ಕಾರ್ಯಕರ್ತರು ರಸ್ತೆ ತಡೆ ನಡೆಸಿ, ಸಾರಿಗೆ ಅಧಿಕಾರಿಗಳ ವಿರುದ್ಧ ಘೋಷಣೆ ಕೂಗುತ್ತಾ ಕೆಲಕಾಲ ಪ್ರತಿಭಟನೆ ನಡೆಸಿದರು.

ಈ ಸಂದರ್ಭದಲ್ಲಿ ಮಾತನಾಡಿದ ಕರವೇ ತಾಲೂಕಾಧ್ಯಕ್ಷ ವೀರೇಶ ಪಸಾರದ, ಬೆಳ್ಳಟ್ಟಿ ಬಸ್ ನಿಲ್ದಾಣದಲ್ಲಿ ಶೌಚಾಲಯ ನಿರ್ಮಾಣದ ಅವೈಜ್ಞಾನಿಕ ಕಾಮಗಾರಿಯಿಂದ ಟ್ಯಾಂಕ್ ತುಂಬಿ ಗಲೀಜು ನೀರು ರಸ್ತೆಯ ತುಂಬೆಲ್ಲಾ ಹರಿದಾಡುತ್ತಿದೆ. ಸಾರ್ವಜನಿಕರ ಆರೋಗ್ಯದ ಮೇಲೆ ಕೆಟ್ಟ ಪರಿಣಾಮ ಬೀರುವುದರ ಜೊತೆಗೆ ರಸ್ತೆಯಲ್ಲಿ ಸಂಚರಿಸುವುದಕ್ಕೂ ಸಹ ಹಿಂಸೆಯಾಗುತ್ತಿದೆ. ಇದನ್ನು ಸರಿಪಡಿಸುವಂತೆ ಹಲವು ಬಾರಿ ಸಾರಿಗೆ ಅಧಿಕಾರಿಗಳಿಗೆ ಹೇಳಿದರೂ ಸಹ ಸ್ಪಂದಿಸಿಲ್ಲ. ಈ ಕೂಡಲೇ ಜಿಲ್ಲಾಮಟ್ಟದ ಅಧಿಕಾರಿಗಳು ಈ ಅವ್ಯವಸ್ಥೆಯನ್ನು ಸರಿಪಡಿಸಿ ಸಾರ್ವಜನಿಕರಿಗೆ ಅನುಕೂಲ ಕಲ್ಪಿಸಬೇಕೆಂದು ಆಗ್ರಹಿಸಿದರು.

ಮಂಜು ದೇಸಳ್ಳಿ, ಸೋಹಿಲ್ ನದಾಫ್, ಆನಂದ ಸತ್ಯಮ್ಮನವರ, ಗೌತಮ ಹಳ್ಳೆಮ್ಮನವರ, ಅಣ್ಣಪ್ಪ ಗುತ್ತೆಮ್ಮನವರ, ಕೊಟ್ರೇಶ ಪೂಜಾರ, ಮಾಂತೇಶ ಮಾಳಮ್ಮನವರ ಮುಂತಾದವರು ಉಪಸ್ಥಿತರಿದ್ದರು.

## ಸಂಪ್ರದಾಯ, ಸಂಸ್ಕೃತಿಗೆ ಆದ್ಯತೆ ನೀಡಿ



■ ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ

ಪಟ್ಟಣದ ವಿನಾಯಕ ನಗರದ ವಿನಾಯಕ ನಗರ ಅಭಿವೃದ್ಧಿ ಸಮಿತಿಯಿಂದ ಪ್ರತಿಷ್ಠಾಪನೆಗೊಂಡ ಗಣೇಶ ಮೂರ್ತಿಯ 2ನೇ ವರ್ಷದ ವಾರ್ಷಿಕೋತ್ಸವ ಸಂಗೀತ, ನೃತ್ಯ, ಸಾಂಸ್ಕೃತಿಕ ಕಾರ್ಯಕ್ರಮಗಳು ಯಶಸ್ವಿಯಾಗಿ ಜರುಗಿದವು.

ಅತಿಥಿಗಳಾಗಿ ಪಾಲ್ಗೊಂಡಿದ್ದ ಪಿಎಸ್‌ಐ ಈರಪ್ಪ ರಿತ್ತಿ ಮಾತನಾಡಿ, ಹಬ್ಬಗಳು ನಮ್ಮ ಸಂಸ್ಕೃತಿಯ ಪ್ರತೀಕವಾಗಿವೆ. ಪಾಶ್ಚಾತ್ಯ ಸಂಸ್ಕೃತಿಗೆ ಮಾರುಹೋಗಿರುವ ಇಂದಿನ ಯುವ ಜನಾಂಗ ನಮ್ಮ ಸಂಸ್ಕೃತಿ ಸಂಪ್ರದಾಯಗಳನ್ನು ಮರೆಯುತ್ತಿರುವದು ವಿಷಾದದ ಸಂಗತಿಯಾಗಿದೆ. ಗಣೇಶನ ಹಬ್ಬಕ್ಕೆ ಇರುವ ಹಿನ್ನೆಲೆಯನ್ನು ಮಕ್ಕಳಿಗೆ ತಿಳಿಸಿಕೊಡುವ ಅರ್ಥಪೂರ್ಣವಾದ ಕಾರ್ಯಕ್ರಮಗಳು ಮೂಡಿಬರಬೇಕಾಗಿದೆ. ಗಣೇಶ ಮಂಡಳಿಗಳು ಭಾರತಿಯ ಸಂಸ್ಕೃತಿಯನ್ನು ಬೆಳೆಸುವ ಮೂಲಕ ಹಬ್ಬವನ್ನು ಅರ್ಥಪೂರ್ಣವಾಗಿ ಆಚರಿಸಿ ಎಂದು ಸಲಹೆ ನೀಡಿದರು.

ಪುರಸಭೆ ಸದಸ್ಯ ಪ್ರವೀಣ ಬಾಳಿಕಾಯಿ, ಉದ್ಯಮಿ ಲೋಹಿತ ನೆಲವಗಿ ಮಾತನಾಡಿದರು. ವೇದಿಕೆಯಲ್ಲಿ ಪುರಸಭೆ ಅಧ್ಯಕ್ಷೆ ಯಲ್ಲವ್ವ ದುರಗಣ್ಣವರ, ಉಪಾಧ್ಯಕ್ಷ ಫಿರ್ದೋಷ ಆಡೂರ, ವಿನಾಯಕ ನಗರ ಅಭಿವೃದ್ಧಿ ಸಮಿತಿ ಗೌರವಾಧ್ಯಕ್ಷ ಚಂಬಣ್ಣ ಬಾಳಿಕಾಯಿ, ಅಧ್ಯಕ್ಷ ಮಂಜುನಾಥ ಹೊಗೆಸೊಪ್ಪಿನ, ಮುಖ್ಯಾಧಿಕಾರಿ ಮಹೇಶ ಹಡಪದ, ವಿಜಯ ಹತ್ತಿಕಾಳ, ಜವಾಹರಸಾ ಪವಾರ, ಸರೋಜಕ್ಕ ಬನ್ನೂರ ಇದ್ದರು.

ಈ ಸಂದರ್ಭದಲ್ಲಿ ಸತೀಶ ಪಾಟೀಲ್, ಜಗದೀಶ ಆಚಾರಿ, ಎಮ್‌ಎಮ್. ಎಲಿಮತ, ರುದ್ರುಮುನಿ ಗಂಟಾಮತ, ರವಿ ಬೋಮಲೆ, ವಿಠ್ಠಲ್ ಬದಿ, ಸತ್ಯೇಂದ್ರ ಸಬಾವಡಿಮಠ, ಡಾ. ಶಿದ್ದಪ್ಪ ನೇಕಾರ, ಭರತ ಜೈನ, ರಂಗಣ್ಣ ಬದಿ, ಮಂಜುನಾಥ ಕೊಡ್ಲಿ, ಮಂಜುನಾಥ ಉಮಚಗಿ ಮತ್ತಿತರರು ಹಾಜರಿದ್ದರು. ವೀರಭದ್ರಯ್ಯ ಹಿರೇಮಠ, ಅನ್ನಪೂರ್ಣೇಶ್ವರಿ ಹಿರೇಮಠ, ವೀರೇಶ ಸಾಸಲವಾಡ, ರಾಘವೇಂದ್ರ ಕಡೆಮನಿ ನಿರೂಪಿಸಿದರು.

## ಗಣೇಶನಿಗೆ ವಿಶೇಷ ಪೂಜೆ

■ ವಿಜಯಸಾಕ್ಷಿ ಸುದ್ದಿ, ಗದಗ

ಇಲ್ಲಿನ ಎ.ಪಿ.ಎಂ.ಸಿ ಯಾರ್ಡ್‌ನಲ್ಲಿ ದಲಾಲ ವರ್ತಕರ ಸಂಘ, ಖರೀದಿದಾರರ ಸಂಘದ ಶ್ರೀ ಗಜಾನನೋತ್ಸವ ಟ್ರಸ್ಟ್ ಕಮಿಟಿ ವತಿಯಿಂದ ಪ್ರತಿಷ್ಠಾಪಿಸಿರುವ ಗಣೇಶನಿಗೆ ಬುಧವಾರ ರಾಜ್ಯ ಕಾನೂನು, ನ್ಯಾಯ, ಮಾನವ ಹಕ್ಕುಗಳು, ಸಂಸದೀಯ ವ್ಯವಹಾರ, ಶಾಸನ ರಚನೆ ಮತ್ತು ಪ್ರವಾಸೋದ್ಯಮ ಮತ್ತು ಗದಗ ಜಿಲ್ಲಾ ಉಸ್ತುವಾರಿ ಸಚಿವರಾದ ಎಚ್.ಕೆ. ಪಾಟೀಲ, ವಿ.ಪ ಸಭಾಪತಿ ಬಸವರಾಜ ಹೊರಟ್ಟಿ ವಿಶೇಷ ಪೂಜೆ ಸಲ್ಲಿಸಿದರು.




ಈ ಸಂದರ್ಭದಲ್ಲಿ ಶ್ರೀ ಗಜಾನನೋತ್ಸವ ಟ್ರಸ್ಟ್ ಕಮಿಟಿ ಅಧ್ಯಕ್ಷ ತಿಮ್ಮಣ್ಣ ಕೋನರೆಡ್ಡಿ, ಗೌರವ ಅಧ್ಯಕ್ಷ ಪ್ರಮೋದ ವಾರಕರ, ಕಾರ್ಯದರ್ಶಿ ರಾಜಶೇಖರ ಮುಧೋಳ, ಉಪಾಧ್ಯಕ್ಷ ರಾಜು ಮೂಲಿಮನಿ, ಸಹ ಕಾರ್ಯದರ್ಶಿ ಚಂದ್ರಕಾಂತ ಸವದತ್ತಿ, ಖಜಾಂಚಿ ಮಹೇಶ ಗಾಣಗೇರ, ಸಹ ಖಜಾಂಚಿ ನೀತಿಶ ವಾಲಿ, ವಿನಾಯಕ ವಜ್ರೇಶ್ವರಿ, ವಿವೇಕಾನಂದ ಗುಡಿಮನಿ, ಕೊಟ್ರೇಶ ಬಾಳಿಕಾಯಿ, ಗಿರೀಶ ಅಳವಂಡಿ, ದಯಾನಂದ ಗುಂಡಪ್ಪನವರ, ವಿನಯ ಕಾಡಪ್ಪನವರ, ಶೇಖಣ್ಣ ಗದ್ದಿಕೇರಿ, ಮುರಗೇಶ ಬಡ್ನಿ, ಮಹಾದೇವಪ್ಪ ಗೌರಿಪುರ, ಪುಂಡಲೀಕಪ್ಪ ಕಂಬಿ, ಪ್ರಕಾಶ ಖೋಡೆ, ಅಶೋಕ ಗಡಾದ, ಬಿ.ಬಿ. ಅಸೂಟಿ, ಜಿ.ಪಂ ಮಾಜಿ ಅಧ್ಯಕ್ಷ ಸಿದ್ಧಲಿಂಗೇಶ ಪಾಟೀಲ, ಅಶೋಕ ಮಂದಾಲಿ, ಫಾರೂಕ್ ಹುಬ್ಬಳ್ಳಿ, ಸಾಗರ ವಜ್ರೇಶ್ವರಿ, ಮುತ್ತಣ್ಣ ಅಂಗಡಿ, ಅಜೀತ ಪುಣೇಕರ, ಮಂಜುನಾಥ ಕವಲೂರ ಹಾಗೂ ಸಂಘದ ಪದಾಧಿಕಾರಿಗಳು ಇದ್ದರು.

## ಸರ್ಕಾರಿ ವಸತಿಗೃಹಗಳ ಲೋಕಾರ್ಪಣೆ

■ ವಿಜಯಸಾಕ್ಷಿ ಸುದ್ದಿ, ಗದಗ

ರಾಜ್ಯದ ಕಾನೂನು, ನ್ಯಾಯ ಮತ್ತು ಮಾನವ ಹಕ್ಕುಗಳು, ಸಂಸದೀಯ ವ್ಯವಹಾರಗಳು, ಶಾಸನ ರಚನೆ ಮತ್ತು ಪ್ರವಾಸೋದ್ಯಮ ಇಲಾಖೆ ಹಾಗೂ ಗದಗ ಜಿಲ್ಲಾ ಉಸ್ತುವಾರಿ ಸಚಿವ ಡಾ. ಎಚ್.ಕೆ. ಪಾಟೀಲರು ಜಿಲ್ಲಾಡಳಿತ ಭವನದ ಹಿಂಬಾಗದಲ್ಲಿ ನಿರ್ಮಿಸಲಾದ ವಸತಿಗೃಹಗಳನ್ನು ಲೋಕಾರ್ಪಣೆಗೊಳಿಸಿದರು.



2021–22ನೇ ಸಾಲಿನ ಜಿಲ್ಲಾ ಪಂಚಾಯತ ಕಚೇರಿ ಕಟ್ಟಡಗಳ ನಿರ್ಮಾಣ ಮತ್ತು ನಿರ್ವಹಣೆ ಯೋಜನೆಯಡಿ ಗ್ರೂಪ್ ಸಿ, ಡಿ ನೌಕರರಿಗೆ 1800 ಚದರ ಮೀಟರ್ ವಿಸ್ತೀರ್ಣದಲ್ಲಿ ಒಟ್ಟು 86 ಲಕ್ಷ ರೂ ವೆಚ್ಚದಲ್ಲಿ ಸುಸಜ್ಜಿತ 4 ಗೃಹಗಳು ನಿರ್ಮಿತಿ ಕೇಂದ್ರದಿಂದ ಮಾಡಲಾಗಿತ್ತು.

ಈ ಸಂದರ್ಭದಲ್ಲಿ ವಿಧಾನ ಪರಿಷತ್ ಸಭಾಪತಿ ಬಸವರಾಜ ಹೋರಟ್ಟಿ, ಜಿಲ್ಲಾ ಗ್ಯಾರಂಟಿ ಸಮಿತಿ ಅಧ್ಯಕ್ಷ ಬಿ.ಬಿ. ಅಸೂಟಿ, ತಾಲೂಕು ಅಧ್ಯಕ್ಷ ಅಶೋಕ ಮಂದಾಲಿ, ಜಿಲ್ಲಾ ಪಂಚಾಯತ ಸಿಇಓ ಭರತ್ ಎಸ್, ನಿರ್ಮಿತಿ ಕೇಂದ್ರದ ಯೋಜನಾ ನಿರ್ದೇಶಕ ಗಂಗಾಧರ ಶಿರೋಳ ಮುಂತಾದವರು ಹಾಜರಿದ್ದರು.

## ಲೋಕ ಕಲ್ಯಾಣಕ್ಕಾಗಿ ಗಣಹೋಮ



■ ವಿಜಯಸಾಕ್ಷಿ ಸುದ್ದಿ, ಗದಗ

ಎಪಿಎಂಸಿ ಯಾರ್ಡ್‌ನಲ್ಲಿ ದಲಾಲ ವರ್ತಕರ ಸಂಘ, ಖರೀದಿದಾರರ ಸಂಘದ ಶ್ರೀ ಗಜಾನನೋತ್ಸವ ಟ್ರಸ್ಟ್ ಕಮಿಟಿ ವತಿಯಿಂದ ಪ್ರತಿಷ್ಠಾಪನೆ ಮಾಡಿರುವ ಗಣೇಶನಿಗೆ ಮಂಗಳವಾರ ಸಂಜೆ ವಿಶೇಷ ಪೂಜೆ, ಮನುಕುಲದ ಒಳಿತಿಗಾಗಿ, ರೈತರ, ವರ್ತಕರ, ಖರೀದಿದಾರರ ವ್ಯವಹಾರ ವೃದ್ಧಿಗಾಗಿ ಗಣಹೋಮ ನೆರವೇರಿಸಲಾಯಿತು.

ಹೋಮದ ಕಾರ್ಯಕ್ರಮದಲ್ಲಿ ಮಧುಸೂದನ್ ಪುಣೇಕರ, ಶ್ರೀ ಗಜಾನನೋತ್ಸವ ಟ್ರಸ್ಟ್ ಕಮಿಟಿ ಅಧ್ಯಕ್ಷ ತಿಮ್ಮಣ್ಣ ಕೋನರೆಡ್ಡಿ, ಗೌರವ ಅಧ್ಯಕ್ಷ ಪ್ರಮೋದ ವಾರಕರ, ಕಾರ್ಯದರ್ಶಿ ರಾಜಶೇಖರ ಮುಧೋಳ, ಉಪಾಧ್ಯಕ್ಷ ರಾಜು ಮೂಲಿಮನಿ, ಸಹ ಕಾರ್ಯದರ್ಶಿ ಚಂದ್ರಕಾಂತ ಸವದತ್ತಿ, ಖಜಾಂಚಿ ಮಹೇಶ ಗಾಣಗೇರ, ಸಹ ಖಜಾಂಚಿ ನೀತಿಶ ವಾಲಿ, ವಿನಾಯಕ ವಜ್ರೇಶ್ವರಿ, ವಿವೇಕಾನಂದ ಗುಡಿಮನಿ, ಕೊಟ್ರೇಶ ಬಾಳಿಕಾಯಿ, ಗಿರೀಶ ಅಳವಂಡಿ, ದಯಾನಂದ ಗುಂಡಪ್ಪನವರ, ವಿನಯ ಕಾಡಪ್ಪನವರ, ಸಾಗರ ವಜ್ರೇಶ್ವರಿ, ಮುತ್ತಣ್ಣ ಅಂಗಡಿ, ಅಜೀತ ಪುಣೇಕರ, ಮಂಜುನಾಥ ಕವಲೂರ, ಬಸವರಾಜ ಅಂಗಡಿ, ಮುರಗೇಶ ಬಡ್ನಿ, ಉಮೇಶ ಹುಬ್ಬಳ್ಳಿ, ಮಂಜುನಾಥ ಬೇಲೇರಿ, ತಾತನಗೌಡ ಪಾಟೀಲ, ದಲಾಲ ವರ್ತಕರ ಸಂಘದ ಹಾಗೂ ಖರೀದಿದಾರರ ಸಂಘದ ಸದಸ್ಯರು ಪಾಲ್ಗೊಂಡಿದ್ದರು.

## ಟಿಪ್ಪರ್ ಸಂಚಾರಕ್ಕೆ ಕಡಿವಾಣ ಹಾಕಿ

■ ವಿಜಯಸಾಕ್ಷಿ ಸುದ್ದಿ, ಗಜೇಂದ್ರಗಡ

ತಾಲೂಕಿನ ಲಕ್ಕಲಕಟ್ಟಿ ಗ್ರಾಮ ಪಂಚಾಯಿತಿ ವ್ಯಾಪ್ತಿಯಲ್ಲಿ ಬರುವ ರುದ್ರಾಪೂರ ಹಾಗೂ ಕಲ್ಲಿಗನೂರ ರಸ್ತೆ ಮಾರ್ಗವಾಗಿ ಸಂಚರಿಸುವ ಭಾರೀ ಗಾತ್ರದ ಟಿಪ್ಪರ್ ವಾಹನಗಳು ಅಪಾಯಕಾರಿಯಾಗಿ ಹಾಗೂ ಕಾನೂನು ಬಾಹಿರವಾಗಿ ಮರಳು ಮತ್ತು ಮಣ್ಣನ್ನು ಸಾಗಿಸುತ್ತಿದ್ದಾರೆ ಎಂದು ತಾಲೂಕಾ ಎಸ್‌ಎಫ್‌ಐ ಸಂಘಟನೆಯಿಂದ ತಹಸೀಲ್ದಾರ್‌ಗೆ ಮನವಿ ನೀಡಿದರು.

ವಾಹನ ಸವಾರರು ರಾಜಾರೋಷವಾಗಿ ಮಣ್ಣು ಹಾಗೂ ಮರಳನ್ನು ಕಾನೂನು ಬಾಹಿರವಾಗಿ ಹಗಲು ದರೋಡೆ ಮಾಡುತ್ತಿದ್ದಾರೆ. ಸಂಬಂಧಪಟ್ಟ ಅಧಿಕಾರಿಗಳು ಕಣ್ಣುಮುಚ್ಚಿ ಕುಳಿತಿದ್ದು, ವಾಹನ ಸಂಚಾರದಿಂದ ರಸ್ತೆ ಹದಗೆಟ್ಟಿದೆ. ವಿದ್ಯಾರ್ಥಿಗಳು, ಸಾರ್ವಜನಿಕರು ತೊಂದರೆ ಅನುಭವಿಸುವಂತಾಗಿದೆ. ಗಜೇಂದ್ರಗಡ ಸಾರಿಗೆ ಘಟಕದ ವ್ಯವಸ್ಥಾಪಕರು ಲಕ್ಕಲಕಟ್ಟಿ ಗ್ರಾ.ಪಂ ವ್ಯಾಪ್ತಿಯ ಕೆಲ ಗ್ರಾಮಗಳಿಗೆ ರಸ್ತೆ ಸರಿಯಿಲ್ಲದ ಕಾರಣ ರುದ್ರಾಪೂರ ಮಾರ್ಗಕ್ಕೆ ಬಸ್ ಬಿಡಲು ನಿರಾಕರಿಸುತ್ತಿದ್ದಾರೆ. ಕೂಡಲೇ ಅಧಿಕಾರಿಗಳು ಸೂಕ್ತ ಕಾನೂನು ಕ್ರಮ ಜರುಗಿಸಲು ಮುಂದಾಗಬೇಕು ಎಂದು ಒತ್ತಾಯಿಸಿದರು.

ಈ ವೇಳೆ ಚಂದ್ರು ರಾಠೋಡ, ಸುದೀಪ್ ಹುಬ್ಬಳ್ಳಿ, ಅನಿಲ ರಾಠೋಡ, ಮಹಾಂತೇಶ ಪೂಜಾರ, ಮುಪ್ಪಯ್ಯ ಬೆಳವನಕಿ, ಸುನೀಲ್ ರಾಠೋಡ ಸೇರಿ ಇತರರು ಇದ್ದರು.



## ಗಣೇಶ ಮೂರ್ತಿಗಳ ವಿಸರ್ಜನೆ

■ ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ

ಪಟ್ಟಣದಲ್ಲಿ ಕಳೆದ ಶನಿವಾರ ಪ್ರತಿಷ್ಠಾಪನೆಗೊಂಡಿದ್ದ ಗಣೇಶನ ಮೂರ್ತಿಗಳಿಗೆ 5ನೇ ದಿನವಾದ ಬುಧವಾರ ವಿದಾಯ ಹೇಳಲಾಯಿತು.

ಪಟ್ಟಣದಲ್ಲಿ ಬಹುತೇಕ ಮನೆಗಳಲ್ಲಿ ಗಣೇಶ ಮೂರ್ತಿಗಳು ವಿಸರ್ಜನೆಗೊಂಡರೆ, ಪಟ್ಟಣ ಹಾಗೂ ಗ್ರಾಮೀಣ ಪ್ರದೇಶಗಳಲ್ಲಿ ಸ್ಥಾಪನೆಗೊಂಡಿದ್ದ ನೂರಾರು ಸಾರ್ವಜನಿಕ ಗಣೇಶ ಮೂರ್ತಿಗಳು 5ನೇ ದಿನವೇ ವಿಸರ್ಜನೆಗೊಂಡವು. ಗಣೇಶನ ವಿಸರ್ಜನೆಯ ಬಂದೋಬಸ್ತ್‌ಗೆ ನಿಯೋಜನೆಗೊಂಡಿದ್ದ ಪೊಲೀಸ್ ಸಿಬ್ಬಂದಿಗಳು ಮದ್ಯಾಹ್ನದ ವೇಳೆಗೆ ಶಿಗ್ಲಿ ನಾಕಾ ಬಳಿ ಪುರಸಭೆಯಿಂದ ನಿರ್ಮಿಸಲಾಗಿದ್ದ ತಾತ್ಕಾಲಿಕ ನೀರಿನ ಗುಂಡಿಗಳಿಗೆ ಗಣೇಶ ಮೂರ್ತಿಯನ್ನು ಮೊದಲನೆಯವರಾಗಿ ವಿಸರ್ಜಿಸಿದರು. ಪಿಎಸ್‌ಐ ಈರಪ್ಪ ರಿತ್ತಿ ಮತ್ತು ಕ್ರೈಮ್ ವಿಭಾಗದ ಪಿಎಸ್‌ಐ ಮಾರುತಿ ಜೋಗದಂಡಿನ, ಎಎಸ್‌ಐಗಳು, ಪೊಲೀಸ್ ಸಿಬ್ಬಂದಿಗಳು ಡೊಳ್ಳು ಕಟ್ಟಿಕೊಂಡು ಕುಣಿದು ಸಂಪ್ರದಾಯದಂತೆ ಮೆರವಣಿಗೆ ಮೂಲಕ ವಿಸರ್ಜನೆ ನೆರವೇರಿಸಿ ಗಮನ ಸೆಳೆದರು.

ಸಿಪಿಐ ನಾಗರಾಜ ಮಾಡಳ್ಳಿ, ಪಿಎಸ್‌ಐ ಈರಪ್ಪ ರಿತ್ತಿ ಹಾಗೂ ಇನ್ನಿತರೆ ಅಧಿಕಾರಿಗಳು ಬಂದೋಬಸ್ತ್‌ನಲ್ಲಿ ಪಾಲ್ಗೊಂಡಿದ್ದರು.



## ಅತಿಥಿ ಶಿಕ್ಷಕರ ಹುದ್ದೆಗಳಿಗೆ ಅರ್ಜಿ ಆಹ್ವಾನ

■ ವಿಜಯಸಾಕ್ಷಿ ಸುದ್ದಿ, ಗದಗ

2024–25ನೇ ಸಾಲಿನಲ್ಲಿ ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆಯ ವತಿಯಿಂದ ಕಾರ್ಯನಿರ್ವಹಿಸುತ್ತಿರುವ ಅಲ್ಪಸಂಖ್ಯಾತರ ಮೊರಾರ್ಜಿ ದೇಸಾಯಿ ವಸತಿ ಶಾಲೆ, ರೋಣದಲ್ಲಿ 6 ರಿಂದ 10ನೇ ತರಗತಿಯವರೆಗಿನ ಮಕ್ಕಳಿಗೆ ಕನ್ನಡ, ಇಂಗ್ಲೀಷ್, ಉರ್ದು, ಗಣಿತ ಮತ್ತು ಸಮಾಜ ವಿಜ್ಞಾನ ವಿಷಯಗಳನ್ನು ಭೋಧಿಸಲು ಬಿ.ಎಡ್ ಪದವಿಯನ್ನು ಹೊಂದಿದ ಅತಿಥಿ ಶಿಕ್ಷಕರು ಅವಶ್ಯವಿರುತ್ತಾರೆ. ಆದ್ದರಿಂದ ಸದರಿ ಅರ್ಹ ವಿದ್ಯಾರ್ಹತೆಯನ್ನು ಹೊಂದಿರುವ ಅಭ್ಯರ್ಥಿಗಳಿಂದ ಅರ್ಜಿ ಆಹ್ವಾನಿಸಲಾಗಿದೆ.

ಅರ್ಹ ಅಭ್ಯರ್ಥಿಗಳು ಸೆಪ್ಟೆಂಬರ್ 17 ರೊಳಗಾಗಿ ತಮ್ಮ ಶೈಕ್ಷಣಿಕ ದಾಖಲಾತಿಗಳನ್ನು ತಾಲೂಕಾ ಮಾಹಿತಿ ಕೇಂದ್ರ, ತಾಲೂಕ ಪಂಚಾಯತ್ ಆವರಣ, ರೋಣ ಈ ಕಚೇರಿಗೆ ಖುದ್ದು ಭೇಟಿ ನೀಡಿ ಅರ್ಜಿ ಸಲ್ಲಿಸಬಹುದಾಗಿದೆ.

VIJAYA SAKSHI KANNADA DAILY MORNING Editor, Printer, Publisher, & Owned by : Hussainsab M. Shareefanavar, H.No. 130/154, Balaji Nagar, Near Ring Road, Gadag-582103, Dist : Gadag- Karnataka Printed at : Sai Printing Press, Near Joda Maruti Temple, Gadag-582101, Dist : Gadag- Karnataka